MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್ Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ Cell : 9743496111

ಸಂಪುಟ: 04 | ಸಂಚಿಕೆ: 263 | ಭಾನುವಾರ : 03-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 263 | SUNDAY : 03-08-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ಪ್ರಜ್ವಲ್ ರೇವಣ್ಣಗೆ ಜೀವಾವಧಿ ಶಿಕ್ಷೆ



**ಬೆಂಗಳೂರು,ಆ.02–** ಕೆಆರ್ ನಗರದ ಮನೆಗೆಲಸದ ಮಹಿಳೆ ಮೇಲೆ ಅತ್ಯಾಚಾರ ಅಪಹರಣ ಪ್ರಕರಣದಲ್ಲಿ ಜೆಡಿಎಸ್ ಮಾಜಿ ಸಂಸದ ಪ್ರಜ್ವಲ್ ರೇವಣ್ಣಗೆ ಜೀವನ ಪರ್ಯಂತ ಜೈಲು ಶಿಕ್ಷೆ ಹಾಗೂ 10 ಲಕ್ಷ ರೂಗಳಿಗೂ ಹೆಚ್ಚು ಮೊತ್ತದ ದಂಡ ವಿಧಿಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ತೀರ್ಪು ನೀಡಿದೆ.

ಸಂಸದ ಪ್ರಜ್ವಲ್ ರೇವಣ್ಣ ಅವರ ವಿರುದ್ಧದ ಆರೋಪ ಸಂಬಂಧ ವಾದ –ಪ್ರತಿವಾದ ಸುದೀರ್ಘ ವಿಚಾರಣೆ ನಡೆಸಿರುವ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು ಜೀವಾವಧಿ ಶಿಕ್ಷೆ ಜೊತೆಗೆ 10 ಲಕ್ಷ ರೂ ದಂಡ ವಿಧಿಸಿ ಆದೇಶಿಸಿದ್ದಾರೆ.

ಇದರಲ್ಲಿ ಸಂತ್ರಸ್ತೆಗೆ 7 ಲಕ್ಷ ರೂ.ಗಳ ಪರಿಹಾರವನ್ನು ನೀಡಲು ಸೂಚಿಸಿದೆ. ಇದಕ್ಕೂ ಮುನ್ನ ವೇಳೆ ಪ್ರಾಸಿಕ್ಯೂಷನ್ ಪರ ವಾದ ಮಂಡಿಸಿದ ಎಸ್‌ಪಿಪಿ ಬಿ.ಎನ್. ಜಗದೀಶ, ಅಧಿಕಾರಯುತ ಸ್ಥಾನದಲ್ಲಿದ್ದ ಪ್ರಜ್ವಲ್ ರೇವಣ್ಣ ಸಂತ್ರಸ್ತ ಮಹಿಳೆಯನ್ನು ಬೆದರಿಸಿ ಆಕೆಯ ಮೇಲೆ ಅತ್ಯಾಚಾರವೆಸಗಿದ್ದರು. ಅವಿದ್ಯಾವಂತೆಯಾಗಿದ್ದ ಆಕೆಯ ಮೇಲೆ ಪದೇ ಪದೆ ಅತ್ಯಾಚಾರ ನಡೆದಿದೆ. ಅಪರಾಧಿಯಿಂದ ಸಂತ್ರಸ್ತೆ ಸುಲಭದ ಬಲಿಯಾಗಿದ್ದಳು. ಆಕೆಯ ಒಪ್ಪಿಗೆಯಿಲ್ಲದೇ ಅತ್ಯಾಚಾರದ ವಿಡಿಯೋ ಸಹ ಮಾಡಿಕೊಂ ಡಿದ್ದರು.

ಬ್ಲಾಕ್‌ಮೇಲ್ ಮಾಡುವ ಉದ್ದೇಶದಿಂದಲೇ, ಅಪರಾಧಿ ಪ್ರಜ್ವಲ್ ರೇವಣ್ಣ ವಿಡಿಯೋ ಮಾಡಿಕೊಂಡಿದ್ದು, ಅವುಗಳನ್ನು ಅಸ್ತ್ರವಾಗಿ ಬಳಸಿಕೊಂಡಿದ್ದಾರೆ. ವಿಡಿಯೋ ಹೊರಬಂದ ನಂತರ ಸಂತ್ರಸ್ತೆ ಆತ್ಮಹತ್ಯೆಗೆ ಯತ್ನಿಸಿದ್ದಳು. ವಿಡಿಯೋ ಬಹಿರಂಗವಾದ ಬಳಿಕ ಆಕೆ ಹಾಗೂ ಆಕೆಯ ಕುಟುಂಬದ ಮರ್ಯಾದೆಗೆ ಧಕ್ಕೆಯಾಗಿದೆ. ಪ್ರಕರಣದಲ್ಲಿ ಸಂತ್ರಸ್ತೆ ದೈಹಿಕವಾಗಿ ಮಾತ್ರವಲ್ಲದೆ ಮಾನಸಿಕವಾಗಿಯೂ ಹಿಂಸೆ ಅನುಭವಿಸಿದ್ದಳು ಎಂದು ನ್ಯಾಯಾಲಯಕ್ಕೆ ವಿವರಿಸಿದರು.

**ಸಾಕ್ಷ್ಯಾಧಾರ ನಾಶಕ್ಕೆ ಯತ್ನ:** ಸಾಕ್ಷ್ಯಾಧಾರ ನಾಶಕ್ಕೆ ಪ್ರಯತ್ನಿಸಲಾಗಿದೆ. ಅಪರಾಧಿಯ ಕುಟುಂಬದವರು ಸಂತ್ರಸ್ತೆಯನ್ನೇ ಅಪಹರಿಸಿ, ತಮಗೆ ಬೇಕಾದ ರೀತಿ ಹೇಳಿಕೆ ಪಡೆದುಕೊಂಡಿದ್ದಾರೆ. ಸಂತ್ರಸ್ತೆಗೆ ಬೆದರಿಕೆಯೊಡ್ಡಿ ಸಾಕ್ಷ್ಯನಾಶಕ್ಕೆ ಯತ್ನಿಸಲಾಗಿದೆ. ಇವೆಲ್ಲವೂ ಗಂಭೀರ ಅಪರಾಧವಾಗಿದೆ. ಸಾಲದಕ್ಕೆ ಕೋರ್ಟ್ ವಿಚಾರಣೆಯನ್ನೂ ವಿಳಂಬ ಮಾಡುವ ಯತ್ನವೂ ನಡೆದಿತ್ತು.

ಅಪರಾಧಿಯ ಮೇಲೆ ಮತ್ತಷ್ಟು ಅತ್ಯಾಚಾರ ಪ್ರಕರಣಗಳು ದಾಖಲಾಗಿವೆ. ಬೇರೆ ಬೇರೆ ಮಹಿಳೆಯರ ಮೇಲಿನ ಅತ್ಯಾಚಾರದ ವಿಡಿಯೋಗಳಿವೆ. ಹಣ ಅಧಿಕಾರ ಇರುವ ಇವರಿಗೆ ಕಡಿಮೆ ಶಿಕ್ಷೆಯಾಗಬಾರದು. ಅಪರಾಧಿಗೆ ಯಾವುದೇ ರೀತಿ ಕನಿಕರ ತೋರಬಾರದು. ಅಪರಾಧಿಯ ವಕ್ರ ಮನಸ್ಥಿತಿ ಗಮನದಲ್ಲಿಟ್ಟುಕೊಳ್ಳಬೇಕು. ಗರಿಷ್ಠ ಪ್ರಮಾಣದ ಶಿಕ್ಷೆಯನ್ನೇ ಅಪರಾಧಿ ಪ್ರಜ್ವಲ್ ರೇವಣ್ಣಗೆ ನೀಡಬೇಕು. ಜೀವನಪರ್ಯಂತ ಸೆರೆವಾಸದ ಶಿಕ್ಷೆ ವಿಧಿಸಬೇಕು ಎಂದು ಎಸ್‌ಪಿಪಿ ಬಿ. ಎನ್. ಜಗದೀಶ್ ಮನವಿ ಮಾಡಿದರು.

**ಸಂಸದರಾಗಿ ಆಯ್ಕೆ:** ರಾಜಕಾರಣಿಯಾಗಿ ಕಿರಿಯ ವಯಸ್ಸಿನಲ್ಲೇ ಪ್ರಜ್ವಲ್ ರೇವಣ್ಣ ಸಂಸದರಾಗಿ ಆಯ್ಕೆಯಾಗಿದ್ದರು. ಜನ ಇವರನ್ನು ಆಯ್ಕೆ ಮಾಡಿದ್ದು ಏಕೆ? ಇವರು ಮಾಡಿದ್ದೇನು? ಸಂಸದರೇ ಇಂಥ ಹೀನ ಕೃತ್ಯವೆಸಗಿದಾಗ ಗರಿಷ್ಠ ಪ್ರಮಾಣದ ಶಿಕ್ಷೆಯನ್ನೇ ವಿಧಿಸಬೇಕು. ಪ್ರಜ್ವಲ್ ಬಡವನಲ್ಲ, ಕೋಟ್ಯಾಧಿಪತಿಯಾಗಿದ್ದಾರೆ. ಆದ್ದರಿಂದ, ಸೆಕ್ಷನ್ 357ರ ಅಡಿಯಲ್ಲಿ ಹೆಚ್ಚಿನ ಮೊತ್ತದ ದಂಡ ವಿಧಿಸಿ, ಅದರ ಬಹುಭಾಗವನ್ನು ಸಂತ್ರಸ್ತೆಗೆ ಪರಿಹಾರವಾಗಿ ನೀಡಬೇಕು. ವಿಡಿಯೋ ಬಹಿರಂಗಗೊಂಡ ಬಳಿಕ ಆಕೆ ಹೊರಗೆ ದುಡಿಯಲು ಹೋಗದಂತಾಗಿದೆ. ಆದ್ದರಿಂದ, ಗರಿಷ್ಠ(2ನೇಪುಟಕ್ಕೆ)

# ಶಿಕ್ಷಣದಿಂದ ಮಾತ್ರ ಜೀವನದಲ್ಲಿ ಯಶಸ್ಸು ಸಾಧ್ಯ : ವಿನಯಕುಮಾರ ಗಣಾಚಾರಿ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಆ.02–** ಇಂದಿನ ತಂತ್ರಜ್ಞಾನದ ಪೈಪೋಟಿ ಯುಗದಲ್ಲಿ ಉತ್ತಮ ಶಿಕ್ಷಣ ಪಡೆದು, ಉನ್ನತ ಸ್ಥಾನ ಪಡೆದರೆ ಮಾತ್ರ ವಿದ್ಯಾರ್ಥಿ ಜೀವನದಲ್ಲಿ ಯಶಸ್ಸು ದೊರೆಯುತ್ತದೆ. ವಿದ್ಯಾರ್ಥಿಗಳು ದುಶ್ಚಟಗಳಿಂದ ದೂರವಿದ್ದು, ಶಿಕ್ಷಕರ ಮಾರ್ಗದರ್ಶನದಲ್ಲಿ ಓದಿನ ಕಡೆಗೆ ಗಮನ ನೀಡಬೇಕೆಂದು ಸಮ್ ಕಾಲೇಜು ಆಡಳಿತಾಧಿಕಾರಿ ವಿನಯ ಗಣಾಚಾರಿ ಹೇಳಿದರು.

ಪಟ್ಟಣದ ಈಶ್ವರ ದೇವಸ್ಥಾನದಲ್ಲಿ ಸಮ್ ಕಾಲೇಜಿನ ಪ್ರಥಮ ಪಿಯುಸಿ, ಪದವಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಸ್ವಾಗತ ಸಮಾರಂಭದಲ್ಲಿ ಮಾತನಾಡಿದ ಅವರು, ಮಕ್ಕಳು ಉತ್ತಮ ಶಿಕ್ಷಣ ಪಡೆದು ಮನೆ, ಊರಿಗೆ ಕೀರ್ತಿಯ ಕಳಸ ಆಗಲಿ ಎಂಬ ಆಶಾಭಾವನೆ ಹೊಂದಿ ಕಷ್ಟಪಟ್ಟು ದುಡಿದು ಕೂಲಿನಾಲಿ ಮಾಡಿ ಓದಿಸುತ್ತಾರೆ. ಪಾಲಕರು ಶ್ರಮ ಸಾರ್ಥಕವಾಗಬೇಕಾದರೆ ವಿದ್ಯಾರ್ಥಿಗಳು ಉನ್ನತ ಗುರಿ ಸಾಧಿಸಲು ಕಠಿಣ ಅಭ್ಯಾಸ ಮಾಡಬೇಕು ಅಂದಾಗ ಮಾತ್ರ ಯಶಸ್ಸು ಸಿಗುತ್ತದೆ. ಇಲ್ಲದೇ ಹೋದರೆ ಭವಿಷ್ಯದ ಬದುಕು ದುರ್ಬರ ಆಗುತ್ತದೆ. ಅಕ್ಷರ ಕಲಿತು ಉತ್ತಮ ಪದವಿ ಪಡೆದು ಊರಲ್ಲಿ ಕೆಲಸವಿಲ್ಲದೇ ಅಲೆಯುವು ಕೆಲಸ ಆಗಬಾರದು ಎಂದು ಹೇಳಿದರು.

ವಿದ್ಯಾರ್ಥಿಗಳು ಜೀವನದಲ್ಲಿ ಉನ್ನತ ಕನಸು ಹೊಂದಿ ಅದನ್ನು ಸಾಕಾರಗೊಳಿಸಲು ಕಠಿಣ ಪರಿಶ್ರಮದಿಂದ ಪಟ್ಟರೆ ಸಾಧನೆ ಸಾಧ್ಯವಾಗುತ್ತದೆ. ಆಗ ಪಾಲಕರು ಹಾಗೂ ಸಮಾಜದಲ್ಲಿ ಉತ್ತಮ ಬದುಕು ಕಟ್ಟಿಕೊಳ್ಳಬೇಕೆಂದುರು.

ಸಮಾರಂಭದಲ್ಲಿ ಕರ್ನಾಟಕ ಕಾಯನಿರತ ಪತ್ರಕರ್ತರ ಸಂಘದಿಂದ ಪ್ರಶಸ್ತಿ ಪಡೆದ ಎನ್.ಬಸವರಾಜ, ವಿಶ್ವನಾಥ ಹೂಗಾರ ಸುನೀಲ್ ಕುಮಾರ, ಶಶಿಧರ ಕಂಚಿಮಠ ರವರಿಗೆ ಸನ್ಮಾನಿಸಿದರು. ಇದರ ಜೊತೆಗೆ ಪತ್ರಕರ್ತ ಸಿದ್ದನಗೌಡರಿಗೂ ಗೌರವಿಸಿದರು. ಸಮ್ ಕಾಲೇಜಿನಲ್ಲಿ ವಿವಿಧ ತರಗತಿಗಳಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಕಾಲೇಜ ವತಿಯಿಂದ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಸಮ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಶರಣಬಸವ ಗಣಾಚಾರಿ, ನಿವೃತ್ತ ಶಿಕ್ಷಕಿ ಗಂಗಮ್ಮ ಕಟ್ಟಿಮನಿ, ಆರ್.ಸಿ ಪಾಟೀಲ್, ಡಾ.ಎಸ್.ಶಿವರಾಜ, ಅಮರೇಶ ಸ್ವಾಮಿ ತೋರಣದಿನ್ನಿ, ವಿರೇಶ ಆದೋನಿ, ಮಸ್ತಾನ ಸಾಬ, ಸ್ವರ್ಣಲತಾ, ಮಂಜುನಾಥ, ಶಿವು ಕುಮಾರ, ರವಿಕುಮಾರ, ಕಿರಣಕುಮಾರ, ವಿಜಯ ಮಹಾಂ ತೇಶ, ಯಮನಪ್ಪ, ಚೆನ್ನಬಸವ, ಸಲ್ಮಾಬೇಗಂ, ನಿರ್ಮಲಾ, ಪ್ರೊ. ಶಾಂತ ಹಿರೇಮಠ, ಶಂಕ್ರಪ್ಪ ಕನ್ನಾಳ, ಸೋನಿಯಾ, ಗಂಗಾಧರ ಖೈರವಾಡಗಿ ಸೇರಿದಂತೆ ಇದ್ದರು.

# ಶಾಸಕ ಬಸನಗೌಡ ದದ್ದಲ್ ಅವರಿಂದ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ

**ಯುವ ಮಾರ್ಗ ಸುದ್ದಿ**

'**ರಾಯಚೂರು,ಆ.02–** ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಶನಿವಾರ ರಾಯಚೂರ ಗ್ರಾಮೀಣ ಭಾಗದಲ್ಲಿ ಪ್ರವಾಸ ಕೈಗೊಂಡರು.

ರಾಯಚೂರು ಗ್ರಾಮೀಣ ಕ್ಷೇತ್ರದ ವ್ಯಾಪ್ತಿಯ ಮನ್ಸಲಾಪೂರ, ಚಿಕ್ಕಸೂಗೂರು ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.

ಮನ್ಸಲಾಪೂರ ಗ್ರಾಮದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ




ಮೈಕ್ರೋ ಯೋಜನೆಯಡಿ ನಿರ್ಮಿಸಲು ಉದ್ದೇಶಿಸಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು.

ಅದೇ ರೀತಿ ಮುಜರಾಯಿ ಇಲಾಖೆಯ ಅನುದಾನದಡಿ ಶ್ರೀಬೀರಪ್ಪ ಗುಡಿ, ಶ್ರೀ ಸಿದ್ದಲಿಂಗೇಶ್ವರ ಗುಡಿ ಮತ್ತು ಶ್ರೀಹುಲಿಗಮ್ಮ ಗುಡಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ಜೊತೆಗೆ ಮನ್ಸಲಾಪೂರು ಗ್ರಾಮ ಪಂಚಾಯತಿಯ ನೂತನ ಕಟ್ಟಡವನ್ನು ಲೋಕಾರ್ಪಣೆ ಮಾಡಿದರು.(2ನೇಪುಟಕ್ಕೆ)

# ಶ್ರೀಉದ್ಭವ ಆಂಜನೇಯ್ಯಸ್ವಾಮಿ ದೇವಸ್ಥಾನದ 22ನೇ ವಾರ್ಷಿಕೋತ್ಸವ ವಿಶೇಷ ಪೂಜೆ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.02–** ಪಟ್ಟಣದ ಎ.ಪಿ.ಎಂ.ಸಿ ಆವರಣದಲ್ಲಿನ ಶ್ರೀಉದ್ಭವ ಆಂಜನೇಯ್ಯಸ್ವಾಮಿ ದೇವಸ್ಥಾನದ 22 ನೇ ವಾರ್ಷಿಕೋತ್ಸವ ಅಂಗವಾಗಿ ಬೆಳಿಗ್ಗೆ ಸುಪ್ರಭಾತ, ಪವಮಾನ ಹೋಮ, ಪೂರ್ಣಹುತಿ, ಪಂಚಾಮೃತ ಅಭಿಶೇ ಕ,ತುಳಸಿ ಪುಷ್ಪಾರ್ಚನೆ,ವಿಶೇಷ ಅಲಂಕಾರ ನಡೆಯಿತು. ರಾಯಚೂರು ರಸ್ತೆಯ ಶ್ರೀಲಕ್ಷ್ಮೀ ದೇವಿ ದೇವಸ್ಥಾನದಿಂದ ಶ್ರೀ ಉದ್ಭವ ಆಂಜನೇಯ್ಯಸ್ವಾಮಿ ದೇವಸ್ಥಾನದವರೆಗೆ



ಪ್ರಮುಖ ಬೀದಿಗಳಲ್ಲಿ ನಡೆದ ಪಲ್ಲಕ್ಕಿ ಮೆರವಣಿಗೆಯಲ್ಲಿ ನೂರಾರು ಸುಮಂಗಲಿಯರು ಪೂರ್ಣಕುಂಭ ಹೊತ್ತು ಭಾಗವಹಿಸಿದರು.ವೀರಗಾಸೆ ಕಲಾವಿದರು ಸೇರಿದಂತೆ ಜನಪದ ಕಲಾತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿದರು. ನಂತರ ಭಕ್ತರಿಗೆ ಅನ್ನಸಂತಾರ್ಪಣೆ ನಡೆಯಿತು. ಸಂಜೆ ಶ್ರೀಉದ್ಭವ ಆಂಜನೇಯ್ಯಸ್ವಾಮಿಯ ಮಹಾರಥೋತ್ಸವ ನಡೆಯಿತು. ಸಾವಿರಾರು ಭಕ್ತರು ಶ್ರೀಆಂಜನೇಯ್ಯಸ್ವಾಮಿಯ ದರ್ಶನ ಮಾಡಿಕೊಂಡರು.

# ಮಕ್ಕಳಿಗೆ ಅತ್ಯುತ್ತಮ ಸಂಪತ್ತಾದ ಶಿಕ್ಷಣ ನೀಡಿ: ಹನುಮೇಶ ರಾಗಲಪರ್ವಿ ಸಲಹೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.02–** ಸಿಂಧನೂರು ತಾಲೂಕಿನ ತುರುವಿಹಾಳ ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಎಸ್.ಸಿ.ಎಸ್.ಪಿ ಹಾಗೂ ಟಿ.ಎಸ್.ಪಿ ಉಪಯೋಜನೆಯಡಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕತೆ ನಿರ್ಮೂಲನೆ ಕುರಿತು ಕಾನೂನು ಅರಿವು ನೆರವು ಕಾರ್ಯಕ್ರಮ ಇತ್ತೀಚೆಗೆ ನಡೆಯಿತು.

ಸಹಾಯಕ ಸರಕಾರಿ ಅಭಿ ಯೋಜಕರಾದ ಹನುಮೇಶ ರಾಗಲ ಪರ್ವಿ ಅವರು ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಮಾಜದಲ್ಲಿ ಶಿಕ್ಷಣ ಅತ್ಯಂತ ಪ್ರಾಮುಖ್ಯತೆ ಹೊಂದಿದೆ. ಸರಿಯಾದ ರೀತಿಯಲ್ಲಿ ಶಿಕ್ಷಣ ಪಡೆದಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದಾಗಿದೆ. ಶಿಕ್ಷಣದಿಂದ ಮಾತ್ರ ದೇಶದ ಪ್ರಗತಿ ಸಾಧ್ಯ. ಜಗತ್ತಿನಲ್ಲಿ ನಿಜವಾದ ಸಂಪತ್ತು ಗಳಿಸಬೇಕಾದರೆ ಉತ್ತಮ ಶಿಕ್ಷಣ ಪಡೆಯುವುದು ಅತ್ಯವಶ್ಯಕವಾಗಿದೆ.



ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದರ ಮೂಲಕ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಎಲ್ಲರು ಕೈಜೋಡಿಸಬೇಕು ಎಂದು ಹೇಳಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕರಾದ ಮಂಜುನಾಥ ರೆಡ್ಡಿ ಅವರು ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಕುರಿತು ಉಪನ್ಯಾಸ ನೀಡಿ, 14 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಸಂಪೂರ್ಣ ನಿಷೇಧಿಸಲಾಗಿದೆ. 14 ವರ್ಷ ಮೇಲ್ಪಟ್ಟು 18 ವರ್ಷದೊಳಗಿನ ಮಕ್ಕಳ ದುಡಿಮೆಯನ್ನು ಅಪಾಯಕಾರಿ ವೃತ್ತಿ ಮತ್ತು ಪ್ರಕ್ರಿಯೆಗಳಲ್ಲಿ ನಿಷೇಧಿಸಲಾಗಿದೆ. ಒಂದು ವೇಳೆ ಕೆಲಸಕ್ಕೆ ನೇಮಿಸಿಕೊಂಡಲ್ಲಿ ತಪ್ಪಿತಸ್ಥ ಮಾಲೀಕರ ವಿರುದ್ಧ ಸಂಬಂಧ ಪಟ್ಟ ಪೊಲೀಸ್ ಠಾಣೆಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ–1986 ಹಾಗೂ ತಿದ್ದುಪಡಿ ಕಾಯ್ದೆ–2016 ರಡಿ ಪ್ರಕರಣ ದಾಖಲಿಸ(2ನೇಪುಟಕ್ಕೆ)

# ಆ.10ರಿಂದ ಶ್ರೀರಾಘವೇಂದ್ರ ತೀರ್ಥ ಗುರು ಸಾರ್ವಭೌಮರ 354ನೇ ಆರಾಧನಾ ಮಹೋತ್ಸವ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಆ.02–** ಪಟ್ಟಣದ ಶ್ರೀ ಮಂತ್ರಾಲಯ ರಾಘವೇಂದ್ರ ಸ್ವಾಮಿಗಳವರ ಮಠದಲ್ಲಿ ಶ್ರೀ ರಾಘವೇಂದ್ರ ತೀರ್ಥ ಗುರುಸಾರ್ವಭೌಮರ 354 ನೇ ಆರಾಧನಾ ಮಹೋತ್ಸವ ಅಂಗವಾಗಿ ಆ.5 ರಿಂದ 10 ರವರೆಗೆ ಸಂಜೆ 6–30ಕ್ಕೆ ಹೈದ್ರಾಬಾದ್‌ನ ಪಂಡಿತ ಶ್ರೀ ಪ್ರಾಣೇಶಾಚಾರ್ಯ ಚಿಕ್ಕದಿನ್ನಿ ರವರಿಂದ ದಾಸರು ಕಂಡ ಗುರು ಸಾರ್ವಭೌಮರ ಚರಿತ್ರೆ ಹಾಗೂ ಹೊಸಪೇಟೆಯ ಪಂಡಿತ ಯು.ಆರ್.ಶ್ರೀನಿವಾಸಾಚಾರ್ಯ ರಿಂದ ಅ.10 ರಿಂದ 12ರವರೆಗೆ ಬೆ.10ಕ್ಕೆ ಶ್ರೀ ರಾಘವೇಂದ್ರ ಸ್ವಾಮಿಗಳವರ ಚರಿತ್ರೆ ವಿಷಯದ ಕುರಿತು ಪ್ರವಚನ ನಡೆಯಲಿದೆ.

ಆ.8 ರಂದು ಸಂಜೆ 6–30ಕ್ಕೆ ಪಂಡಿತ ಹನುಮೇಶ ಅಚಾರ್ಯ ನೇತೃತ್ವದಲ್ಲಿ ಅಷ್ಟಾಕ್ಷರ ಮಂತ್ರ ಹೋಮ ಹಾಗೂ ಪೂರ್ಣಹುತಿ, ಅ.9 ರಂದು ಬೆಳಿಗ್ಗೆ 7.30ಕ್ಕೆ ಋಗ್ವೇದ ಯಜುರ್ವೇದ ನಿತ್ಯ ನೂತನೂಪಾಕರ್ಮ , ಸಾಮೂಹಿಕ ಶ್ರೀ ಸತ್ಯನಾರಾಯಣ ಸ್ವಾಮಿ ಪೂಜೆ, ಸಂಜೆ 5–30ಕ್ಕೆ ಗೋಪೂಜೆ ಧಾನ್ಯ ಪೂಜೆ, ನಡೆಯಲಿದೆ. ಅ.10 ರಂದು ಸಾಮೂಹಿಕ ಉಪನಯನ ಕಾರ್ಯಕ್ರಮ 3 ದಿನಗಳ ಕಾಲ ನಡೆಯಲಿರುವ ಆರಾಧನ ಮಹೋತ್ಸವದಲ್ಲಿ ರಾಘವೇಂದ್ರ ಸ್ವಾಮಿಗಳವರ ಮೃತಿಕ ವೃಂದಾವನಕ್ಕೆ ಬೆಳಿಗ್ಗೆ ಸುಪ್ರಭಾತ ಸೇವೆ, ಅಷ್ಟೋತ್ತರ ಪಾರಾಯಣ, (2ನೇಪುಟಕ್ಕೆ)

# ಹಳ್ಳಿ–ಸಣ್ಣಹೊಸೂರು ಸಂಪರ್ಕ ಕಡಿತ:ಗ್ರಾಮಸ್ಥರ ಆಕ್ರೋಶ

**ಯುವ ಮಾರ್ಗ ಸುದ್ದಿ**

**ಸಿರವಾರ,ಆ.02–** ತಾಲೂಕಿನ ಸಣ್ಣಹೊಸೂರು ಹಾಗೂ ಹಳ್ಳಿ ನಡುವಿನ ಹಳ್ಳದ ಸೇತುವೆ ಕಾಮಗಾರಿ ಕೈಗೆತ್ತಿಕೊಂಡಿದ್ದು ಕಾಮಗಾರಿ ಇಷ್ಟೋತ್ತಿಗಾಗಲೇ ಮುಗಿಯಬೇಕಿತ್ತು ಗುತ್ತೇದಾರರ ವಿಳಂಬದಿಂದ ಕಾಮಗಾರಿ ಕಳೆದ ಒಂದು ತಿಂಗಳಿಂದ ಸ್ಥಗಿತಗೊಂಡಿದ್ದು ಹಳ್ಳಿಯಿಂದ ಸಣ್ಣಹೊಸೂರು ಗ್ರಾಮದ ಹೊಲಗಳಿಗೆ ರೈತರು ಕೆಲಸಕ್ಕೆ ಹೋಗುವುದು ಮತ್ತು ಮಕ್ಕಳು ಶಾಲೆಗೆ ಹೋಗುವ ಸಂಪರ್ಕ ಕಳೆದುಕೊಂಡಿದೆ ಇಗಾಗಿ ಅಧಿಕಾರಿಗಳಿಗೆ ಹಾಗೂ ಗುತ್ತೇದಾರರಿಗೆ ಗ್ರಾಮಸ್ಥರು ಇಡೀ ಶಾಪ ಹಾಕುತ್ತಿದ್ದಾರೆ.

ಸಣ್ಣಹೊಸೂರು–ಹಳ್ಳಿ ಗ್ರಾಮದ ಹಳ್ಳದ



ಸೇತುವೆ ಕಾಮಗಾರಿ ನಡೆಯುತ್ತಿರುವುದರಿಂದ ಹಳ್ಳಿ ಜನರು ಸಣ್ಣಹೊಸೂರು ಗ್ರಾಮಕ್ಕೆ ಹೋಗಿ ಬರಲು ಪೈಪುಗಳ ಅಳವಡಿಸಿ ತಾತ್ಕಾಲಿಕ ಸಂಪರ್ಕ ಕಲ್ಪಿಸಲಾಗಿತ್ತು ಭಾರಿ ಮಳೆಗೆ ತಾತ್ಕಾಲಿಕ ಸೇತುವೆ ಕೊಚ್ಚಿ ಹೋಗಿದ್ದರ ಪರಿಣಾಮ ಹಳ್ಳ ದಾಟಲು ಜನರು ಜೀವ ಅಂಗೈಯಲ್ಲಿಡಿದು ಹಗ್ಗ ಕಟ್ಟಿ ಹಿಡಿದುಕೊಂಡು ದಾಟುತ್ತಿದ್ದರೆ,ಇನ್ನೂ ಕೆಲ ಜನರು ಹಳ್ಳಿಯಿಂದ 25 ಕಿ.ಮೀ. ಲಕ್ಕಂದಿನ್ನಿ ಗ್ರಾಮದ ಮೂಲಕ ಸುತ್ತುವರೆದು ಹೊಲಗಳಿಗೆ ಹೋಗುತ್ತಿದ್ದಾರೆ.

**ಕಾಮಗಾರಿ ತ್ವರಿತಗತಿಯಲ್ಲಿ ಮುಗಿಸಲಿ:**

ತಾತ್ಕಾಲಿಕ ಸೇತುವೆ ಕೊಚ್ಚಿ ಹೋಗಿದ್ದರಿಂದ ನಿತ್ಯ ಕೂಲಿಕಾರರು ಕೆಲಸಕ್ಕೆ ಹೋಗಲು ತೊಂದರೆಯಾಗಿದೆ, ರೈತರು ಹೊಲಗಳಿಗೆ ಹೋಗಿ ಬರಲು ಕಷ್ಟವಾಗಿದೆ ತಕ್ಷಣ ಕ್ಷೇತ್ರದ ಜನಪ್ರತಿನಿಧಿಗಳು ಗಮನ ಹರಿಸಬೇಕು ಅಧಿಕಾರಿಗಳಿಗೆ ಹಾಗೂ ಗುತ್ತೇದಾರರಿಗೆ ಕಾಮಗಾರಿ ತ್ವರಿತಗತಿಯಲ್ಲಿ ಮುಗಿಸಲು ಸೂಚನೆ ನೀಡಲಿ ಅಲ್ಲದೇ ತಕ್ಷಣ ತಾತ್ಕಾಲಿಕವಾಗಿ ಪೈಪುಗಳನ್ನು ಅಳವಡಿಸಿ ಸಂಪರ್ಕ ಕಲ್ಪಿಸಬೇಕು ಎಂದು ಹಳ್ಳಿ ಗ್ರಾಮಸ್ಥರು ಆಗ್ರಹಿಸಿದ್ದಾರೆ, ಒಂದು ವೇಳೆ ನಿರ್ಲಕ್ಷ ವಹಿಸಿದಲ್ಲಿ ಗ್ರಾಮಸ್ಥರು ಎಲ್ಲಾರೂ ಸೇರಿ ಹೋರಾಟ ಮಾಡುವ ಎಚ್ಚರಿಕೆ ನೀಡಿದ್ದಾರೆ.

## ಮೊದಲನೇಯ ಪುಟದಿಂದ

# ಪ್ರಜ್ವಲ್ ರೇವಣ್ಣಗೆ ಜೀವಾವಧಿ ಶಿಕ್ಷೆ

ಪ್ರಮಾಣದ ಶಿಕ್ಷೆ ನೀಡಬೇಕು ಎಂದು ಪ್ರಾಸಿಕ್ಯೂಷನ್ ಪರ ವಕೀಲ ಅಶೋಕ್ ನಾಯಕ್ ವಾದ ಮಂಡಿಸಿದರು.

ಪ್ರಜ್ವಲ್ ಜನಸೇವೆ:

ಇದಕ್ಕೆ ವಿರೋಧ ವ್ಯಕ್ತಪಡಿಸಿದ ಪ್ರಜ್ವಲ್ ಪರ ವಾದ ಮಂಡಿಸಿದ ವಕೀಲರಾದ ನಳೀನಾ ಮಾಯೇಗೌಡ, ಯುವ ಸಂಸದನಾಗಿ ಪ್ರಜ್ವಲ್ ಜನಸೇವೆ ಮಾಡಿದ್ದಾರೆ. ಹಣ ಮಾಡಬೇಕೆಂಬ ಉದ್ದೇಶದಿಂದ ರಾಜಕಾರಣಕ್ಕೆ ಬಂದವರಲ್ಲ. ಆರೋಪಿಯ ರಾಜಕೀಯ ಸ್ಥಾನಮಾನ ಶಿಕ್ಷೆಗೆ ಕಾರಣವಾಗಬಾರದು. ಇಷ್ಟು ದಿನ ಅವರು ಸಂಪಾದಿಸಿದ್ದ ಒಳ್ಳೆಯ ಹೆಸರು ಏನಾಗಬೇಕು. ಸಂತ್ರಸ್ತೆ ಸಮಾಜದಿಂದ ತಿರಸ್ಕೃತಗೊಂಡವರಲ್ಲ. ಸಂಸಾರದೊಂದಿಗೆ ಎಂದಿನಂತೆ ಜೀವನ ಸಾಗಿಸುತ್ತಿದ್ದಾರೆ. ಚುನಾವಣಾ ಸಂದರ್ಭದಲ್ಲಿಯೇ ವಿಡಿಯೋ ಹರಿಬಿಡಲಾಗಿದ್ದು, ಪ್ರಜ್ವಲ್ ವಿರುದ್ಧ ರಾಜಕೀಯ ಪಿತೂರಿ ನಡೆಸಲಾಗಿದೆ. ಪ್ರಜ್ವಲ್ ಯುವಕನಾಗಿದ್ದು ಆತನ ಭವಿಷ್ಯವನ್ನೂ ಗಮನಿಸಬೇಕು. ಈಗಾಗಲೇ ಮಾಧ್ಯಮಗಳಲ್ಲಿ ತೇಜೋವಧೆ ಆಗಿದೆ. ವಯಸ್ಸಾದ ತಂದೆ–ತಾಯಿ ಇದ್ದಾರೆ. ಅವರ ತಾತ ಮಾಜಿ ಪ್ರಧಾನಿಯಾಗಿದ್ದಾರೆ. ನ್ಯಾಯಾಲಯ ವಿಧಿಸುವ ಶಿಕ್ಷೆಯಿಂದ ಪ್ರಜ್ವಲ್ ಅವರ ಭವಿಷ್ಯಕ್ಕೆ ಹಾನಿಯಾಗಬಾರದು ಎಂದು ಮನವಿ ಮಾಡಿದರು.

ಕಣ್ಣೀರಿಡುತ್ತಲೇ ಪ್ರತಿಕ್ರಿಯೆ:

ವಾದ ಆಲಿಸಿದ ನ್ಯಾಯಾಧೀಶರು, ಪ್ರಜ್ವಲ್ ಅವರನ್ನು ಕುರಿತು, ನೀವೇನಾದರೂ ಹೇಳಲು ಬಯಸುವಿರೇ ಎಂದು ಪ್ರಶ್ನಿಸಿದರು. ಅದಕ್ಕೆ ಕಣ್ಣೀರಿಡುತ್ತಲೇ ಪ್ರತಿಕ್ರಿಯಿಸಿದ ಪ್ರಜ್ವಲ್, ನಾನು ಹಲವು ಮಹಿಳೆಯರೊಂದಿಗೆ ಈ ಕೃತ್ಯವೆಸಗಿದ್ದೇನೆ ಎಂದು ಆರೋಪಿಸಲಾಗುತ್ತಿದೆ. ಸಂಸದನಾದಾಗ ಯಾರೂ ಇಂಥ ಆರೋಪ ಮಾಡಿಲ್ಲ. ರೇಪ್ ಮಾಡಿದ್ದೇನೆಂದು ಯಾರೂ ಹೇಳಿಲ್ಲ. ಆರು ತಿಂಗಳಿಂದ ತಂದೆ–ತಾಯಿಯನ್ನು ನೋಡಿಲ್ಲ. ನಾನು ಮಾಡಿದ ಒಂದೇ ತಪ್ಪೇನೆಂದರೆ ರಾಜಕೀಯದಲ್ಲಿ ಬೇಗ ಬೆಳೆದದ್ದು. ಈ ವಿಚಾರದಲ್ಲಿ ಮಾಧ್ಯಮಗಳನ್ನೂ ದೂರುವುದಿಲ್ಲ. ಕೋರ್ಟ್ ಆದೇಶಕ್ಕೆ ತಲೆ ಬಾಗುತ್ತೇನೆ ಎಂದು ನುಡಿದರು.

# ಶಾಸಕರಾದ ಬಸನಗೌಡ ದದ್ದಲ್ ಅವರಿಂದ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ

ಚಿಕ್ಕಸೂಗೂರು ಗ್ರಾಮಕ್ಕೆ ತೆರಳಿದ ಶಾಸಕರು, ಶ್ರೀ ಆಂಜನೇಯ ಸ್ವಾಮಿ ಗುಡಿ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು. ಜೊತೆಗೆ ವಿಶೇಷ ಅನುದಾನದಲ್ಲಿ ಹಜರತ್ ಬಾಬಾ ಫಕ್ರುದ್ದೀನ್ ದರ್ಗಾ ಕಾಮಗಾರಿಗು ಸಹ ಭೂಮಿ ಪೂಜೆ ನೆರವೇರಿಸಿದರು. ಸ್ವಂತ ಸಂಪನ್ಮೂಲ ಅನುದಾನದಡಿ ವಿವಿಧ ಕಾಮಗಾರಿಗಳಿಗೆ ಶಾಸಕರು ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂಧರ್ಭದಲ್ಲಿ ದೇವಸೂಗುರ ಬ್ಲಾಕ್ ಅಧ್ಯಕ್ಷರು, ಮನ್ಸಲಾಪೂರ, ಚಿಕ್ಕಸೂಗೂರು ಸೇರಿದಂತೆ ಸುತ್ತಲಿನ ಗ್ರಾಮಗಳ ಹಿರಿಯ ಮುಖಂಡರು, ನಾಮ ನಿರ್ದೇಶಿತ ಸದಸ್ಯರು, ಅಧಿಕಾರಿಗಳು, ಗ್ರಾಮ ಪಂಚಾಯತ್ ಅಧ್ಯಕ್ಷರು, ಸದಸ್ಯರು, ಕಾರ್ಯಕರ್ತರು, ಗ್ರಾಮಸ್ಥರು ಉಪಸ್ಥಿತರಿದ್ದರು.

# ಮಕ್ಕಳಿಗೆ ಅತ್ಯುತ್ತಮ ಸಂಪತ್ತಾದ ಶಿಕ್ಷಣ ನೀಡಿ: ಹನುಮೇಶ ರಾಗಲಪರ್ವಿ ಸಲಹೆ

'ಲಾಗುವುದು ಎಂದು ಹೇಳಿದರು. ದುಡಿಯುವ ಮಕ್ಕಳು ಎಲ್ಲಿಯಾದರೂ ಕಂಡು ಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ 1098/112 ಗೆ ಉಚಿತವಾಗಿ ಕರೆ ಮಾಡಿ ಮಾಹಿತಿ ನೀಡುವುದರ ಮೂಲಕ ಸಮಾಜದಲ್ಲಿರುವ ಬಾಲಕಾರ್ಮಿಕ ಪದ್ಧತಿ ಎಂಬ ಪಿಡುಗನ್ನು ಹೋಗಲಾಡಿಸಲು ಎಲ್ಲರು ಸಹಕಾರ ನೀಡಬೇಕೆಂದು ತಿಳಿಸಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ(ದೌರ್ಜನ್ಯ ತಡೆ)ಕಾಯ್ದೆಯ ಕುರಿತು ವೀರಭದ್ರಗೌಡ ಸಾಲಗುಂದ ವಕೀಲರು ಉಪನ್ಯಾಸ ನೀಡಿದರು. ಕಾರ್ಮಿಕ ನಿರೀಕ್ಷಕರಾದ ವಿಜಯಲಕ್ಷ್ಮೀ ಅವರು ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಪ್ರಭುರಾಜ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವ್ಯವಸ್ಥಾಪಕರಾದ ದುರ್ಗಪ್ಪ, ತುರುವಿಹಾಳ ಪೊಲೀಸ್ ಠಾಣೆಯ ಎ.ಎಸ್.ಐ ಬಸಯ್ಯ, ವಕೀಲರಾದ ವೀರಭದ್ರಗೌಡ ಸಾಲಗುಂದ, ಚಂದ್ರು, ವಿಶ್ವೇಶ್ವರಯ್ಯ ಕಟ್ಟಡ ಕಾರ್ಮಿಕರ ಕಲ್ಯಾಣ ಸಂಘದ ಅನ್ವರ ಪಾಶ, ಕಾರ್ಮಿಕ ಇಲಾಖೆಯ ಸಿಬ್ಬಂದಿ ಜೋಕಿಮ್, ಅಕೌಂಟೆಂಟ್ ಹುಸೇನ್ ನಾಯ್ಕ, ಮಾರ್ಗದರ್ಶಿ ಸಂಸ್ಥೆಯ ಹನುಮಂತ ಹಾಗೂ ಸ್ಥಳೀಯ ನಿವಾಸಿಗಳು ಮತ್ತು ಇನ್ನಿತರರು ಉಪಸ್ಥಿತರಿದ್ದರು.

# ಆ.10ರಿಂದ ಶ್ರೀರಾಘವೇಂದ್ರ ತೀರ್ಥ ಗುರು ಸಾರ್ವಭೌಮರ 354ನೇ ಆರಾಧನಾ ಮಹೋತ್ಸವ

ಫಲಪಂಚಾಮೃತಾಭೀಷೇಕ, ಕನಕಾಭಿಷೇಕ,ಅರ್ಚನೆ,ಅಲಂಕಾರ ಹಸ್ತೋದಕ,ಮಹಾಮಂಗಳಾರತಿ, ಸಂಜೆ ವಿವಿಧ ಭಜನಾ ಮಂಡಳಿಯವರಿಂದ ಭಜನೆ,ಸ್ವಸ್ತಿವಾಚನ,ಮಹಾಮಂಗಳಾರತಿ, ಶ್ರೇಯ ಪ್ರಾರ್ಥನೆ ನೆರವೇರಲಿದೆ ಅ.10 ರಂದು ಪೂರ್ವಾರಾಧನೆ, ಅ.11 ರಂದು ಮಧ್ಯಾರಾಧನೆ, ಅ.12 ರಂದು ಉತ್ತರಾರಾಧನೆ ಅಂಗವಾಗಿ ವಿವಿಧ ಭಜನಾ ಮಂಡಳಿಯವರೊಂದಿಗೆ ಪಟ್ಟಣದ ರಾಜಬೀದಿಗಳಲ್ಲಿ ಮಹಾರಥೋತ್ಸವ ಕಾರ್ಯಕ್ರಮವನ್ನು ಶ್ರೀ ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಶ್ರೀ ಸುಬುಧೇಂದ್ರ ತೀರ್ಥ ಶ್ರೀ ಪಾದಂಗಳವರ ಅಜ್ಞಾನುಸಾರವಾಗಿ ಹಮ್ಮಿಕೊಳ್ಳಲಾಗಿದ್ದು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆರಾಧನಾ ಮಹೋತ್ಸವದಲ್ಲಿ ಭಾಗಿಗಳಾಗುವಂತೆ ಗೌರವ ವಿಚಾರಣಾಕರ್ತರಾದ ಮುದ್ದುರಂಗರಾವ್ ಮುತಾಲಿಕ್ ಪ್ರಕಟಣೆಯ ಮೂಲಕ ಕೋರಿದ್ದಾರೆ.

# ಡೆಂಗೆ ವಿರೋಧಿ ಮಾಸಾಚರಣೆ ಹಿನ್ನೆಲೆ ಪಾಲಕರಿಗೆ ಕಾರ್ಯಗಾರ

**ರಾಯಚೂರು,ಆ.02–** ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಘಟಕ ಹಾಗೂ ತಾಲೂಕ ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಹಯೋಗ ದೊಂದಿಗೆ ವಸತಿ ನಿಲಯ ಅಧಿಕಾರಿ ಸಿಬ್ಬಂದಿಗೆ ಡೆಂಗೆ ವಿರೋಧಿ ಮಾಸಾಚರಣೆ ಅಂಗವಾಗಿ ಒಂದು ದಿನದ ಕಾರ್ಯಗಾರ ನಡೆಯಿತು.

ಕಾರ್ಯಾಗಾರಕ್ಕೆ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳಾದ ಡಾ.ಚಂದ್ರಶೇಖರಯ್ಯ ಸ್ವಾಮಿ ಅವರು ಸಸಿಗೆ ನೀರೆರೆದು ಉದ್ಘಾಟಿಸಿದರು.

ಈ ವೇಳೆ ಅವರು ಮಾತನಾಡಿ, ಜಗತ್ತಿನಲ್ಲಿ ಹಲವಾರು ಜಾತಿಯ ಸೊಳ್ಳೆಗಳಿವೆ. ಆದರೆ ಈಡೀಸ್ ಈಜಿಪ್ಟ್, ಅನಾಫಿಲಿಸ್, ಕ್ಯೂಲೆಕ್ಸ ಈ ಮೂರು ಸೊಳ್ಳೆಗಳು ಮನುಷ್ಯರನ್ನು ಕಾಡುವಂತಹವು. ಡೆಂಗೆ ಜ್ವರ ವೈರಸ್ ನಿಂದ ಬರುವ ಕಾಯಿಲೆ, ಸಾಂಕ್ರಾಮಿಕ ರೋಗವಾಗಿದ್ದು, ಈಡೀಸ್ ಈಜಿಪ್ಟೈ ಎಂಬ ಹೆಣ್ಣು ಸೋಂಕಿತ ಸೊಳ್ಳೆ ಕಚ್ಚುವುದರಿಂದ ಬರುವ ಕಾಯಿಲೆ. ಇದು ಹಗಲಲ್ಲೆ ಕಚ್ಚುತ್ತೆ. ಈಡಿಸ್ ಈಜಿಪ್ಟೈ ಸೊಳ್ಳೆಗೆ ಟೈಗರ್ ಸೊಳ್ಳೆಯಂತಲೂ ಕರೆಯುತ್ತಾರೆ ಎಂದರು.ಈ ಸೊಳ್ಳೆಯು ಸ್ವಚ್ಛವಾದ ನೀರಿನಲ್ಲಿ ಬೆಳೆಯುತ್ತದೆ. ನೂರರಿಂದ ಇನ್ನೂರು ತತ್ತಿಗಳನ್ನು ಇಡುತ್ತದೆ. ನೀರಿನ ಪರಿಕರಗಳಲ್ಲಿ, ಘನ ತ್ಯಾಜ್ಯ ವಸ್ತುಗಳಲ್ಲಿ, ಮಳೆ ನೀರು ನಿಂತು ಸೊಳ್ಳೆ ಉತ್ಪತ್ತಿಯಾಗುತ್ತವೆ. ನಿಂತ ನೀರು ಸೊಳ್ಳೆ ಉತ್ಪತ್ತಿ ತಾಣಗಳು ಎಂದು ತಿಳಿಸಿದರು.ಡೆಂಗೆ ರಕ್ತಸ್ರಾವ ಡೆಂಗೆ ಶಾಕ್ ಸಿಂಡ್ರೋಮ್, ಡೆಂಗೆ ಜ್ವರಕ್ಕೆ ಚಿಕಿತ್ಸೆ ಇರುವುದಿಲ್ಲ. ರೋಗದ ಲಕ್ಷಣಗಳ ಅನುಗುಣವಾಗಿ ಚಿಕಿತ್ಸೆ ನೀಡಲಾಗುತ್ತದೆ. ಸ್ವಯಂ ರಕ್ಷಣಾ ವಿಧಾನಗಳಾದ ಮೈ ತುಂಬಾ ಬಟ್ಟೆ ಧರಿಸುವುದು, ಸೊಳ್ಳೆ ಪರದೆ ಬಳಕೆ, ಕಿಡಿಕಿಗಳಿಗೆ ಜಾಲರಿ ಅಳವಡಿಕೆ, ಗುಡ್ ನೈಟ್ ಕ್ವಾಯಿಲ್ ಬಳಕೆ, ಸೊಳ್ಳೆ ನಾಶಕ ಬ್ಯಾಟ್‌ನಂತಹ ಸ್ವಯಂ ರಕ್ಷಣಾ ವಿಧಾನ, ರಾಸಾಯನಿಕ ವಿಧಾನ, ಜೈವಿಕ ವಿಧಾನಗಳ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸಬೇಕು ಎಂದು ಅವರು ಸಲಹೆ ಮಾಡಿದರು.

ಈ ವೇಳೆ ತಾಲೂಕ ಆರೋಗ್ಯಾಧಿಕಾರಿ ಡಾ. ಪ್ರಜ್ವಲ್ ಕುಮಾರ ಅವರು ಮಾತನಾಡಿ, ನೀರಿನ ಪರಿಕರಗಳು ವಾರಕ್ಕೊಮ್ಮೆ ತೊಳೆದು ಒಣಗಿಸಬೇಕು. ಡ್ರೈ–ಡೇ ಮಾಡಬೇಕು. ಯಾವುದೇ ಜ್ವರ ಇರಲಿ ಹತ್ತಿರ ಆಸ್ಪತ್ರೆಗೆ ಹೋಗಿ ರಕ್ತ ಪರೀಕ್ಷೆ ಮಾಡಿಸಿ ಕೊಳ್ಳಬೇಕು. ಡೆಂಗೆ ಜ್ವರ ನಿಯಂತ್ರಣ ನಮ್ಮೆಲ್ಲರ ಜವಬ್ದಾರಿ. ಪ್ರತಿಯೊಂದು ವಸತಿ ನಿಲಯದ ಒಳಾಂಗಣ ಹೊ ರಾಂಗಣ ಸುತ್ತಲು ಸ್ವಚ್ಚತೆಗೆ ಆದ್ಯತೆ ಕೊಡಬೇಕು ವಿದ್ಯಾರ್ಥಿಗಳಿಗೆ ಯಾವುದೇ ಜ್ವರ ಇರಲಿ ಆರೋಗ್ಯ ಸಿಬ್ಬಂದಿಗೆ ಮಾಹಿತಿ ನೀಡಿ ರಕ್ತ ಪರೀಕ್ಷೆ ಮಾಡಿಸಬೇಕೆಂದರು. ಇದೇ ಸಂದರ್ಭದಲ್ಲಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜ.ಕೆ, ಮಲೇರಿಯಾ ತಾಂತ್ರಿಕ ಮೇಲ್ವಿಚಾರಕರಾದ ಸಂಧ್ಯಾ, ವಿವಿಧ ವಸತಿ ನಿಲಯಪಾಲಕರಾದ ಗಂಗಣ್ಣ, ನಾಗೇಂದ್ರ, ನಾಗವೇಣಿ, ಸುಕುಮಾರ್ ಸೇರಿದಂತೆ ಇತರರು ಇದ್ದರು.

# ಆ.4ಕ್ಕೆ ಮುಷ್ಟೂರು ದೇವಸ್ಥಾನ ಉದ್ಘಾಟನೆ :ವಿವಿಧ ಧಾರ್ಮಿಕ ಕಾರ್ಯಕ್ರಮ

**ಯುವ ಮಾರ್ಗ ಸುದ್ದಿ**

**ದೇವದುರ್ಗ,ಆ.02**–ತಾಲೂಕಿನ ಮುಷ್ಟೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಆಂಜನೇಯ ದೇವಸ್ಥಾನ ಉದ್ಘಾಟನಾ ಕಾರ್ಯಕ್ರಮ, ಪಂಚ ಕಳಸಾ ರೋಹಣ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಅ.4ರಂದು ನಡೆಯಲಿವೆ.

ಸೋಮವಾರ ಬೆಳಗಿನ ಜಾವ ರುದ್ರಾಭಿಷೇಕ, ಹೋಮ–ಹವನ ಸೇರಿ ವಿವಿಧ ಪೂಜೆಗಳು ನಡೆಯಲಿವೆ. ತದನಂತರ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮ ಬಳಿಕ ಮುತ್ತೈದೆಯರಿಂದ ಕುಂಭ ಕಳಸ ಮೆರವಣಿಗೆ ನಡೆಯಲಿದೆ.

ಸಮಾರಂಭವನ್ನು ಮಾಜಿ ಶಾಸಕರಾದ ಶಿವನಗೌಡ ನಾಯಕ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶಾಸಕಿ ಜಿ.ಕರಿಯಮ್ಮ ನಾಯಕ, ಅತಿಥಿಯಾಗಿ ಮಾಜಿ ಸಂಸದರಾದ ಬಿ.ವಿ.ನಾಯಕ ಭಾಗವಹಿಸಲಿದ್ದಾರೆ. ಶ್ರೀ ಶ್ರೀ ಷ.ಬ್ರ.ಚನ್ನಬಸವೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ಗೆಜ್ಜೆಬಾವಿ ಮಠ, ಶ್ರೀ ಶ್ರೀ ಷ.ಬ್ರ ಶಂಭುಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು, ಪಂಚಾಕ್ಷರಿ ತೀರ್ಥ ಬಹ್ಮನ್ಮಠ ಸುಲ್ತಾನಪುರ ಹಾಗೂ ಶ್ರೀ ಶ್ರೀ ಪರಮಪೂಜ್ಯ ಮರಿಹುಚ್ಚೇಶ್ವರ ಮಹಾಸ್ವಾಮಿಗಳು, ಶ್ರೀ ರಾಮಲಿಂಗೇಶ್ವರ ಮಠ ಗುಳಬಾಳ್, ಶ್ರೀವೇ.ಮೂ. ಡಾ.ಬಸವರಾಜ ಸ್ವಾಮಿ ಗಡ್ಡಿಮಠ ಜ್ಯೋತಿ ಬೆಳಗಿಸಲಿದ್ದಾರೆ.



ಮುಷ್ಟೂರು ಆಂಜನೇಯ ಸ್ವಾಮಿ ಸುತ್ತಮುತ್ತಲಿನ ಗ್ರಾಮಗಳ ಆರಾಧ್ಯದೈವವಾಗಿದೆ ಮತ್ತು ಈ ಭಾಗದಲ್ಲಿ ತುಂಬಾ ಜನಪ್ರಿಯ ಮಂದಿರವಾಗಿದೆ. ಮೂರು ವರ್ಷಗಳಿಂದ ನಡೆಯುತ್ತಿದ್ದ ನೂತನ ಕಟ್ಟಡ ಕಾಮಗಾರಿ ಮುಗಿದಿದ್ದು, ಉದ್ಘಾಟನೆ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಗ್ರಾಮದ ಭಕ್ತರು ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಮುಷ್ಟೂರಿನ ಗ್ರಾಮಸ್ಥರು ಮನವಿ ಮಾಡಿದ್ದಾರೆ.

# ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್‌ನಿಂದ ಮಹಿಳಾ ಸ್ವ–ಸಹಾಯ ಗುಂಪುಗಳಿಗೆ ಉದ್ಯಮಶೀಲತಾ ತರಬೇತಿ

**ಯುವ ಮಾರ್ಗ ಸುದ್ದಿ**




**ರಾಯಚೂರು,ಆ.02**–ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಮತ್ತು ಲೈಫ್‌ಸ್ಟೋನ್ ಸಹಯೋಗದಲ್ಲಿ, ರಾಯಚೂರು ತಾಲೂಕಿನ ಮೂರು ಮಹಿಳಾ ಸ್ವ–ಸಹಾಯ ಸಂಘಗಳಿಗೆ ಒಂದು ದಿನದ ಉದ್ಯಮಶೀಲತೆ ಅಭಿವೃದ್ಧಿ ಕಾರ್ಯಾಗಾರವನ್ನು ಬಿಚ್ಚಾಲಿ ಗ್ರಾಮ ಪಂಚಾಯತ್‌ನಲ್ಲಿ ಹಮ್ಮಿಕೊಳ್ಳಲಾಗಿತ್ತು. ಆಗಸ್ಟ್ 2, 2025ರಂದು ನಡೆದ ಈ ಕಾರ್ಯಾಗಾರದಲ್ಲಿ ಮಹಿಳೆಯರಿಗೆ ಉದ್ಯಮ ಪ್ರಾರಂಭಿಸಲು ಬೇಕಾದ ಪೂರ್ವಸಿದ್ಧತೆ ಮತ್ತು ನಿರ್ವಹಣೆಯ ಬಗ್ಗೆ ತರಬೇತಿ ನೀಡಲಾಯಿತು.

ಜಾಗೀರ ವೆಂಕಟಾಪುರ ಗ್ರಾಮದ ಶ್ರೀನಿಧಿ ಸಂಘ, ಜಂಬಲದಿನ್ನಿಯ ಅಂಬಾ ಭವಾನಿ ಸಂಘ ಮತ್ತು ಹಿರೇಪುರದ ಶ್ರೀ ಬೃಂದಾವನ ಫುಡ್ ಪ್ರಾಡಕ್ಟ್ ಯೂನಿಟ್‌ನ ಸದಸ್ಯರು ಈ ತರಬೇತಿಯಲ್ಲಿ ಭಾಗವಹಿಸಿದ್ದರು.

**ಉದ್ಯಮಶೀಲತೆಯ ಯಶಸ್ಸಿಗೆ ಮಾರ್ಗದರ್ಶನ**

ತರಬೇತುದಾರರಾದ ವಿನಾಯಕ. ಆರ್ ಅವರು ಮಾತನಾಡಿ, ಯಾವುದೇ ಉದ್ಯಮವನ್ನು ಯಶಸ್ವಿಯಾಗಿ ಸ್ಥಾಪಿಸಲು ಪೂರ್ವಸಿದ್ಧತೆ, ಮಾರುಕಟ್ಟೆ ಸಮೀಕ್ಷೆ, ವ್ಯಾಪಾರ ಯೋಜನೆ, ಹಣಕಾಸು ನಿರ್ವಹಣೆ, ಉತ್ಪಾದನೆ, ಮಾರ್ಕೆಟಿಂಗ್, ಬ್ಯಾಂಕಿಂಗ್ ಮತ್ತು ಆನ್‌ಲೈನ್ ವ್ಯವಹಾರಗಳ ಬಗ್ಗೆ ಅರಿವು ಅಗತ್ಯ ಎಂದು ತಿಳಿಸಿದರು. ಈ ಕೌಶಲ್ಯಗಳನ್ನು ರೂಢಿಸಿಕೊಂಡಾಗ ಮಾತ್ರ ಸ್ವಾವಲಂಬಿ ಜೀವನ ನಡೆಸಲು ಮತ್ತು ಆರ್ಥಿಕ ಬದಲಾವಣೆ ತರಲು ಸಾಧ್ಯ ಎಂದರು.

ಮತ್ತೊಬ್ಬ ತರಬೇತುದಾರರಾದ ಸುರೇಶ್ ಹೆಚ್. ಮಾತನಾಡಿ, SVYM ಈಗಾಗಲೇ 10 ಸ್ವ–ಸಹಾಯ ಸಂಘಗಳಿಗೆ ಆರ್ಥಿಕ ನೆರವು ನೀಡಿ, ಉದ್ಯಮಿಗಳನ್ನಾಗಿ ಪರಿವರ್ತಿಸಿದೆ ಎಂದು ಹೇಳಿದರು. ಈ ಸಂಘಗಳು ಕ್ಲೀನಿಂಗ್ ಉತ್ಪನ್ನಗಳು, ಸಿಮೆಂಟ್ ರಿಂಗ್ ತಯಾರಿಕೆ ಮತ್ತು 'ಪೇ ಅಂಡ್ ಯೂಸ್' ಶೌಚಾಲಯ ಘಟಕಗಳನ್ನು ನಿರ್ಮಿಸಿ ಯಶಸ್ಸು ಗಳಿಸಿವೆ ಎಂದು ವಿವರಿಸಿ, ಎಲ್ಲರೂ ಇದೇ ರೀತಿ ಮುನ್ನಡೆಯುವಂತೆ ಪ್ರೋತ್ಸಾಹಿಸಿದರು.

ಬೃಂದಾವನ ಗ್ರಾಮೀಣ ವ್ಯಾಪಾರ ಘಟಕದ ಮುಖ್ಯಸ್ಥೆ ಶ್ವೇತಾ ಕುಲಕರ್ಣಿ ತಮ್ಮ ಯಶಸ್ಸಿನ ಕಥೆ ಹಂಚಿಕೊಂಡರು. ತಾವು ಸಂಸ್ಥೆಯ ಸಹಾಯದಿಂದ ಐದಾರು ರೀತಿಯ ತಿನಿಸುಗಳನ್ನು ತಯಾರಿಸಿ ಮಾರಾಟ ಮಾಡುತ್ತಿರುವುದಾಗಿ ತಿಳಿಸಿದರು. ತಮ್ಮ ಘಟಕದಲ್ಲಿ 12 ಜನ ಸದಸ್ಯರು ನಿರಂತರವಾಗಿ ಕೆಲಸ ಮಾಡುತ್ತಿದ್ದಾರೆ. ಮಾರುಕಟ್ಟೆ ಪ್ರಾರಂಭದಲ್ಲಿ ಕಷ್ಟವಾದರೂ, ಈಗ ನೇರವಾಗಿ ಗ್ರಾಹಕರು ಘಟಕಕ್ಕೆ ಬಂದು ಉತ್ಪನ್ನಗಳನ್ನು ಖರೀದಿಸುತ್ತಿದ್ದಾರೆ ಎಂದರು. ಮಂತ್ರಾಲಯದಂತಹ ಸ್ಥಳಗಳಲ್ಲಿ ರೋಟಿ, ಶೇಂಗಾ ಚಟ್ನಿ, ಶೇಂಗಾ ಚಿಕ್ಕಿ, ರಾಗಿ ಹಪ್ಪಳ ಮತ್ತು ಶೇಂಗಾ ಉಂಡೆಗಳನ್ನು ಮಾರಾಟ ಮಾಡುತ್ತಿರುವುದಾಗಿ ಹೇಳಿದರು. ಮೊದಲಿಗೆ ಭಯವಾಗಿದ್ದರೂ, ಈಗ ಎಲ್ಲವೂ ಸರಿಯಾಗಿ ನಡೆಯುತ್ತಿದೆ. ಎಲ್ಲ ಸದಸ್ಯರೂ ಲೆಕ್ಕಪತ್ರಗಳ ಬಗ್ಗೆ ತಿಳಿದುಕೊಂಡಿದ್ದಾರೆ. ನಗರಗಳಲ್ಲಿ ನಡೆಯುವ ಕಾರ್ಯಕ್ರಮಗಳಲ್ಲಿ ವ್ಯಾಪಾರ ಮಳಿಗೆಗಳನ್ನು ಹಾಕಿ ಮಾರಾಟ ಮಾಡುತ್ತೇವೆ ಎಂದು ತಿಳಿಸಿ, ಮಹಿಳೆಯರಿಗೆ ಸ್ಫೂರ್ತಿ ತುಂಬಿದರು.

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷರಾದ ಅಶ್ವಿನಿ, ಅರ್ಚನಾ ಸೇರಿದಂತೆ 30ಕ್ಕೂ ಹೆಚ್ಚು ಮಹಿಳೆಯರು ಮತ್ತು ಸಂಸ್ಥೆಯ ಸಿಬ್ಬಂದಿಗಳಾದ ಲಿಂಗಪ್ಪ, ರಾಜೇಶ್ ಮತ್ತು ಭೀಮಯ್ಯ ಉಪಸ್ಥಿತರಿದ್ದರು.

# ದುಶ್ಚಟ ದುರ್ಗುಣದಿಂದ ಯುವಕರು ಹೊರಗೆ ಬರಲು ಕರೆ : ಡಾ.ಮಲ್ಲಿಕಾರ್ಜುನ

**ಬೀದರ,ಆ.02**–ಯುವಕರು ಅನಾವಶ್ಯಕವಾಗಿ ದುಶ್ಚಟಗಳಿಗೆ ಬಲಿಯಾಗಿ ಜೀವನ ಹಾಳು ಮಾಡಿಕೊಳ್ಳುತ್ತಿರುವುದು ಅತ್ಯಂತ ವಿಷಾದಕರ ಸಂಗತಿ. ಯುವಕರಾದವರು ಜೀವನದ ಗುರಿ ಗೊತ್ತು ಅರ್ಥಹಿಸಿಕೊಂಡು ದಾರಿ ಕಂಡುಕೊಳ್ಳಲು ಧನಾತ್ಮಕ ಚಿಂತನೆಯಲ್ಲಿ ತೊಡಗಬೇಕೆಂದು ಎಲುಬು, ಮೂಳೆ, ಕೀಲು ತಜ್ಞರಾದ ಡಾ. ಮಲ್ಲಿಕಾರ್ಜುನ ಜಿ.ಬಿ. ನುಡಿದರು.



ಸ್ಥಳಿಯ ವಚನ ಚಾರಿಟೇಬಲ್ ಸೊಸೈಟಿ (ರಿ) ಬೀದರ ಹಾಗೂ ಸರಕಾರಿ ಪದವಿ ಪೂರ್ವ ಕಾಲೇಜು (ಬಾಲಕಿಯರ) ಬೀದರ ಇವರ ಸಂಯುಕ್ತಾಶ್ರಯದಲ್ಲಿ ವ್ಯಸನ ಮುಕ್ತ ದಿನಾಚರಣೆಯನ್ನು ಡಾ. ಮಲ್ಲಿಕಾರ್ಜುನ ಜಿ.ಬಿ. ಜ್ಯೋತಿ ಬೆಳಗಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಇಂದು ಹೆಣ್ಣುಮಕ್ಕಳು ಸಂಸ್ಕೃತಿ ಕಾಪಾಡಿದರೆ ಸುಂದರ ಸಮಾಜ ನಿರ್ಮಾಣಗೊಳ್ಳಲು ಸಾಧ್ಯ ಎಂದರು.

ಪೂಜ್ಯ ವಿಜಯಮಹಾಂತ ಅಪ್ಪಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಸೋಮಶೇಖರ ಬಿರಾದಾರ ಅಧ್ಯಕ್ಷರು ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಬೀದರ ಅವರು ಮಾತನಾಡುತ್ತ ದೇಶದಲ್ಲಿ ಶೇ. 85. ಯುವಕರು ಶೇ. 15 ಯುವತಿಯರು ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಯುವಕರು ತಮ್ಮ ಒಡನಾಟಿಗಳ ಮತ್ತು ಗೆಳೆಯರ ಒತ್ತಾಯಕ್ಕೆ ಮಣಿದು ಡ್ರಗ್ ಸೇವನೆ ಮಾಡಿ ಜೀವನ ಹಾಳುಮಾಡಿಕೊಳ್ಳುತ್ತಿದ್ದಾರೆ. ಇದರಿಂದ ಹೊರ ಬರಲು ಕಾಲೇಜು ಓದುವ ಮಕ್ಕಳು ವೈಚಾರಿಕತೆ ಹಾಗೂ ವೈಜ್ಞಾನಿಕ ಮನೋಭಾವನೆ ಅಳವಡಿಸಿಕೊಳ್ಳಲು ತಿಳಿ ಹೇಳಿದರು.

ಲಿಂಗಾರತಿ ಅಲ್ಲಮಪ್ರಭು ನಾವದಗೇರೆ ಅಧ್ಯಕ್ಷರು ಅನುಭವ ಎಜ್ಯುಕೇಷನ್ ಆಂಡ್ ಚಾರಿಟೇಬಲ್ ಟ್ರಸ್ಟ್ ಬೀದರ ಮಾತನಾಡುತ್ತ ಮಹಾಂತ ಸ್ವಾಮಿಗಳು ತಮ್ಮ ಜೀವಮಾನದಲ್ಲಿ ಮನೆ ಮನೆಗೆ ಮಹಾಂತ ಜೋಳಿಗೆ ತೆಗೆದುಕೊಂಡು ಹೋಗಿ ಜನರ ದುಶ್ಚಟಗಳ ದಾಸ್ಯದದಿಂದ ಹೊರ ತರಲು ಪ್ರಯತ್ನಿಸಿದರು. ಇಂದು ಮೊಬೈಲ್ ನಮ್ಮ ಯುವಕರಿಗೆ ದಾರಿ ತಪಿಸುತ್ತಿದೆ. ತಾವು ಅದರಿಂದ ಒಳ್ಳಯದನ್ನು ಮಾತ್ರ ಗಮನಿಸಿ ಕೆಟ್ಟ ಸಂಗತಿಗಳು ಬಂದಾಗ ದೂರವಿರಲು ಹೇಳಿದರು. ಹೆಣ್ಣು ಸಮಾಜದ ಕಣ್ಣು ಎನ್ನುವ ದಿಸೆಯಲ್ಲಿ ವಿದ್ಯಾರ್ಥಿನಿಯರು ತಮ್ಮ ಓದಿನ ಜೊತೆಗೆ ಸಂಸ್ಕಾರಯುತ ಜೀವನ ಸಾಗಿಸಲು ಪ್ರಯತ್ನವಾದಿ ಗಳಾಗಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಿಜಯಕುಮಾರ ತೋರಣೆಕರ್ ಮಾನ್ಯ ಪ್ರಾಚಾರ್ಯರು ಸ.ಪ.ಪೂ ಕಾಲೀಜು (ಬಾಲಕಿಯರ) ಬೀದರ ಮಾತನಾಡಿ ಇಂದಿನ ಕಾರ್ಯಕ್ರಮ ನಮ್ಮ ಮಕ್ಕಳಿಗೆ ಅತ್ಯಂತ ಉಪಯುಕ್ತವಾಗಿದೆ ಎಂದು ನುಡಿದರು.

ಪೂಜ್ಯ ಶ್ರೀ ಬಸವಮಹಾಂತ ಮಹಾಸ್ವಾಮಿಗಳು ಸಿರಸಂಗಿ ಮಠ ಬೆಳಗಾವಿ ಇವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಪ್ರಾಸ್ತವಿಕವಾಗಿ ಡಾ. ಸುರೇಶ ಪಾಟೀಲ ಅಧ್ಯಕ್ಷರು ವಚನ ಚಾರಿಟೇಬಲ್ ಸೊಸೈಟಿ (ರಿ) ಬೀದರ ಮಾತನಾಡಿದರು. ಮೊದಲಿಗೆ ಕಾಲೇಜಿನ ಅಕ್ಷತಾ, ವನೀತಾ, ನಾಡಗೀತೆ ಹಾಡಿದರು. ಪ್ರಾಧ್ಯಾಪಕರಾದ ಬಸವರಾಜ ಮಯೂರ ಸ್ವಾಗತಿಸಿದರೆ, ಪ್ರಾಧ್ಯಾಪಕರಾದ ರಾಜಶೇಖರ ಮಂಗಲಗಿ ವಂದಿಸಿದರೆ, ಶಿವಶಂಕರ ಟೋಕರೆ ನಿರೂಪಿಸಿದರು.

# ಟ್ರಂಪ್‌ಗೆ ಮೋದಿ ತಿರುಗೇಟು

**ವಾರಣಸಿ, ಆ.2–** ಭಾರತದ ಆರ್ಥಿಕತೆ ಸತ್ತ ಆರ್ಥಿಕತೆ ಎಂದು ಟೀಕೆ ಮಾಡಿದ್ದ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆಗೆ ತಿರುಗೇಟು ನೀಡಿರುವ ಪ್ರಧಾನಿ ನರೇಂದ್ರ ಮೋದಿ, ಭಾರತ ವಿಶ್ವದ ಮೂರನೇ ಆರ್ಥಿಕ ದೇದತ್ತ ದಾಪುಗಾಲು ಇಟ್ಟಿದೆ ಎಂದು ಹೇಳಿದ್ದಾರೆ.

ಸ್ವದೇಶಿ ಉತ್ಪನ್ನಗಳು ಜಾಗತಿಕವಾಗಿ ಸದ್ದು ಮಾಡುತ್ತಿವೆ. ಜಾಗತಿಕ ಆರ್ಥಿಕ ಪ್ರಕ್ಷುಬ್ಧತೆಯ ನಡುವೆಯೂ ಭಾರತೀಯ ಆರ್ಥಿಕತೆ ಯಾವುದೇ ಏರಿಳಿತವಿಲ್ಲದೆ ಸಮಾನವಾಗಿ ಸಾಗುತ್ತಿದೆ. ಹೀಗಾಗಿಯೇ ವಿಶ್ವದ ನಾಲ್ಕನೆಯ ಅತಿದೊಡ್ಡ ಆರ್ಥಿಕ ದೇಶವಾಗಿದ್ದು ಮೂರನೇ ಆರ್ಥಿಕತೆಯ ದೇಶವಾಗುತ್ತ ಹೆಜ್ಜೆ ಹಾಕಿದೆ ಎಂದಿದ್ದಾರೆ.

ಉತ್ತರ ಪ್ರದೇಶದ ವಾರಣಾಸಿಯಲ್ಲಿ ಪಿಎಂ ಕಿಸಾನ್ ನಿಧಿಯ ಕಂತು ಬಿಡುಗಡೆ ಬಳಿಕ ಸಾರ್ವಜನಿಕ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು , ದೇಶದ ಹಿತಾಸಕ್ತಿಗಳನ್ನು ಪೂರೈಸಲು ಸರ್ಕಾರ ಅಗತ್ಯವಿರುವ ಎಲ್ಲವನ್ನೂ ಮಾಡುತ್ತಿದೆ ಎಂದು ಗುಡುಗಿದ್ದಾರೆ ಜಗತ್ತಿನಲ್ಲಿ ಅಸ್ಥಿರತೆಯ ವಾತಾವರಣವಿದೆ. ಎಲ್ಲಾ ದೇಶಗಳು ತಮ್ಮ ವೈಯಕ್ತಿಕ ಹಿತಾಸಕ್ತಿಗಳ ಮೇಲೆ ಕೇಂದ್ರೀಕರಿಸುತ್ತಿವೆ. ಭಾರತ ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗುವ ಕಡೆಗೆ ಹೆಜ್ಜೆ ಹಾಕುತ್ತಿದೆ. ಅದಕ್ಕಾಗಿಯೇ ಭಾರತ ತನ್ನ ಆರ್ಥಿಕ ಹಿತಾಸಕ್ತಿಗಳಿಗೆ ಸಂಬಂಧಿಸಿದಂತೆ ಜಾಗರೂಕರಾಗಿದೆ ಎಂದಿದ್ದಾರೆ

ದೇಶದ ಹಿತದೃಷ್ಟಿಯಿಂದ ಸಾಧ್ಯವಿರುವ ಎಲ್ಲವನ್ನೂ ಮಾಡುತ್ತಿದೆ.ದೇಶಕ್ಕೆ ಒಳಿತನ್ನು ಬಯಸುವವರು ಮತ್ತು ಭಾರತವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಿ ನೋಡಲು ಬಯಸುವವರು, ಯಾವುದೇ ರಾಜಕೀಯ ಪಕ್ಷವಾಗಿರಲಿ, ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು 'ಸ್ವದೇಶಿ' ಉತ್ಪನ್ನಗಳಿಗೆ ಒತ್ತು ನೀಡಬೇಕು ಎಂದು ಮನವಿ ಮಾಡಿದ್ದಾರೆ .ಭಾರತೀಯರು ತಯಾರಿಸಿದ ವಸ್ತುಗಳನ್ನು ಮಾತ್ರ ಖರೀದಿಸುತ್ತೇವೆ. ಸ್ಥಳೀಯರಿಗೆ ಧ್ವನಿಯಾಗಬೇಕು" ಎಂದು ಹೇಳಿದ ಪ್ರಧಾನಿ ಅದು ಮುಂದಿನ ಭವಿಷ್ಯಕ್ಕೆ ದಾರಿಯಾಗಲಿದೆ ಎಂದಿದ್ದಾರೆ

**ರಕ್ತ ಕುದಿಯುತ್ತಿತ್ತು :**ಹೆಣ್ಣು ಮಕ್ಕಳ ಹಣೆಯ ಸಿಂಧೂರ ಅಳಿಸಿದ ಭಯೋತ್ಪಾದಕರ ಕೃತ್ಯ ರಕ್ತ ಕುದಿಯುವಂತೆ ಮಾಡಿತ್ತು.ಆಗಲೇ ತಕ್ಕ ಶಾಸ್ತಿ ಮಾಡಲು ಪ್ರತಿಜ್ಞೆ ತೊಟ್ಟಿದ್ದೆ. ಮಹಾದೇವನ ಆಶೀರ್ವಾದದಿಂದ ಆ ಪ್ರತಿಜ್ಞೆ ಈಡೇರಿದೆ. ಹೀಗಾಗಿ ಆಪರೇಷನ್ ಸಿಂಧೂರ್ ಯಶಸ್ಸನ್ನು ಮಹಾದೇವನ ಪಾದಗಳಿಗೆ ಅರ್ಪಿಸುತ್ತೇನೆ ಎಂದು ಹೇಳಿದ್ದಾರೆ.

ಅನ್ಯಾಯ ಮತ್ತು ಭಯೋತ್ಪಾದನೆ ಎದುರಿಗೆ ಇದ್ದಾಗ, ಮಹಾದೇವ 'ರುದ್ರ ರೂಪ' ತಾಳುತ್ತಾನೆ. ಆಪರೇಷನ್ ಸಿಂಧೂರ್ ಸಮಯದಲ್ಲಿ ಜಗತ್ತು ಭಾರತದ ಈ ಮುಖ ನೋಡಿತು. ಭಾರತದ ತಂಟೆಗೆ ಬಂದವರು ಪಾತಾಳ ಲೋಕ'ದಲ್ಲಿಯೂ ಅಡಗಿ ಕುಳಿತಿದ್ದರೂ ಸುಮ್ಮನೆ ಬಿಡುವುದಿಲ್ಲ ಎಂದು ಗುಡುಗಿದರು. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿ ರಾಷ್ಟ್ರೀಯ ಭದ್ರತೆಯ ಬಗ್ಗೆ ಚಿಂತಿಸುವಂತೆ ಮಾಡಿತ್ತು.26 ಅಮಾಯಕರ ಸಾವು ತೀವ್ರ ಆಘಾತ ಉಂಟು ಮಾಡಿತ್ತು ಎಂದು ಭಾವುಕರಾದರು.

ಕಾಶಿಗೆ ಆಪರೇಷನ್ ಸಿಂಧೂರ್ ಯಶಸ್ಸಿನ ಬಳಿಕ ಮೊದಲ ಭೇಟಿ ಇದು". ಆಪರೇಷನ್ ಸಿಂಧೂರ್‌ನ ಯಶಸ್ಸು 140 ಕೋಟಿ ಭಾರತೀಯರ ಒಗ್ಗಟ್ಟಿನಿಂದ ಸಾಧ್ಯವಾಯಿತು.



ಈ ಯಶಸ್ಸನ್ನು ಮಹಾದೇವನ ಪಾದಗಳಿಗೆ ಅರ್ಪಿಸುತ್ತೇನೆ ಎಂದು ತಿಳಿಸಿದ್ದಾರೆ."ಪವಿತ್ರ 'ಸಾವನ್' ಮಾಸದಲ್ಲಿ ಬಾಬಾ ವಿಶ್ವನಾಥನಿಗೆ ಪ್ರಾರ್ಥನೆ ಸಲ್ಲಿಸಲು ಬಯಸಿದ್ದೆ. ಆದರೆ ಅಲ್ಲಿಗೆ ಹೋದರೆ, ಇತರ ಭಕ್ತರಿಗೆ ಅನಾನುಕೂಲತೆ ಎದುರಿಸಬೇಕಾಗುತ್ತದೆ ಮತ್ತು ಪ್ರಾರ್ಥನೆ ಸಲ್ಲಿಸಲು ಸಾಧ್ಯವಾಗುವುದಿಲ್ಲ, ಹೀಗಾಗಿ ಇಲ್ಲಿಂದಲೇ ಭೋಲೆನಾಥ್ ಮತ್ತು ಗಂಗಾ ಮಾತೆಯ ಮುಂದೆ ನಮಸ್ಕರಿಸುತ್ತೇನೆ ಎಂದಿದ್ದಾರೆ

**ಕಾಂಗ್ರೆಸ್ ಅಭಿವೃದ್ಧಿ ವಿರೋಧಿ:** ಪಿಎಂ: ದುರದೃಷ್ಟವಶಾತ್, ಕೆಲವು ಜನರಿಗೆ ಆಪರೇಷನ್ ಸಿಂಧೂರ್‌ನ ಯಶಸ್ಸು ಇಷ್ಟವಾಗುವುದಿಲ್ಲ. ಭಾರತ ಪಾಕಿಸ್ತಾನದ ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಿದೆ ಎಂಬ ಅಂಶವನ್ನು ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳಿಗೆ ಅರಗಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು ಪ್ರತಿ ಪಕ್ಷಗಳ ವಿರುದ್ಧ ನೇರ ವಾಗ್ದಾಳಿ ನಡೆಸಿದ್ದಾರೆ.

ಸಮಾಜವಾದಿ ಪಕ್ಷ ಮತ್ತು ಕಾಂಗ್ರೆಸ್‌ನಂತಹ ಅಭಿವೃದ್ಧಿ ವಿರೋಧಿಗಳು ಸರ್ಕಾರದ ವಿರುದ್ಧ ವದಂತಿಗಳನ್ನು ಹರಡುತ್ತವೆ ಮತ್ತು ಸಾಧ್ಯವಿರುವ ಎಲ್ಲಾ ರೀತಿಯಲ್ಲಿ ಜನರನ್ನು ದಾರಿ ತಪ್ಪಿಸುತ್ತವೆ..ವಿರೋಧ ಪಕ್ಷ ಸುಳ್ಳು ಭರವಸೆಗಳೊಂದಿಗೆ ಬದುಕುತ್ತಿರುವುದು ದೇಶಕ್ಕೆ ತುಂಬಾ ದುರದೃಷ್ಟಕರ ಎಂದಿದ್ದಾರೆ

ರೈತ ಕಲ್ಯಾಣಕ್ಕೆ ಕೇಂದ್ರ ಬದ್ಧ: ಸರ್ಕಾರ ರೈತರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರ ಬದ್ಧವಾಗಿದೆ. . ಹಿಂದಿನ ಸರ್ಕಾರಗಳು ತಾವು ಭರವಸೆ ನೀಡಿದ್ದ ಒಂದೇ ಒಂದು ಯೋಜನೆ ಸಹ ಈಡೇರಿಸಲಿಲ್ಲ. ಬಿಜೆಪಿ ಸರ್ಕಾರ ಬಂದ ನಂತರ ರೈತರಿಗೆ ನೀಡಿದ ಎಲ್ಲಾ ಭರವಸೆ ಈಡೇರಿಸಿದೆ. ಪಿಎಂ ಕಿಸಾನ್ ಸಮ್ಮಾನ್ ನಿಧಿ ಸರ್ಕಾರದ ಬಲವಾದ ಇಚ್ಛಾಶಕ್ತಿ ಮತ್ತು ಉದ್ದೇಶಗಳಿಗೆ ಉದಾಹರಣೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ

ಪಿಎಂ ಕಿಸಾನ್ ಸಮ್ಮಾನ್ ನಿಧಿ ಆರಂಭದಿಂದಲೂ . ಇಲ್ಲಿಯವರೆಗೆ, ಫಲಾನುಭವಿ ರೈತರ ಖಾತೆಗಳಿಗೆ 3.75 ಲಕ್ಷ ಕೋಟಿ ರೂ.ಗಳನ್ನು ಜಮೆ ಮಾಡಲಾಗಿದೆ.ಕಾಶಿಯ ರೈತರು ಮಾತ್ರ 900 ಕೋಟಿ ರೂ.ಗಳನ್ನು ಪಡೆದಿದ್ದಾರೆ ಎಂದರು.

## ಚುನಾವಣಾ ಆಯೋಗವನ್ನು ಬಿಜೆಪಿಯವರು ಸಮರ್ಥಿಸಿಕೊಳ್ಳುತ್ತಿರುವುದೇಕೆ..? : ಡಿ.ಕೆ. ಸುರೇಶ್



**ಬೆಂಗಳೂರು,ಆ.2–** ಕೇಂದ್ರ ಚುನಾವಣಾ ಆಯೋಗದ ಕುರಿತು ಹೇಳಿಕೆ ನೀಡಿದರೆ ಬಿಜೆಪಿ ಅಡ್ಡಬಾಯಿ ಹಾಕಿ ಸಮರ್ಥಿಸಿಕೊಳ್ಳುತ್ತಿರುವುದೇಕೆ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆಯಲ್ಲಿ ಅಕ್ರಮಗಳಾಗಿವೆ ಎನ್ನುತ್ತಿದ್ದಂತೆ ಬಿಜೆಪಿಯವರು ಭಯ ಬೀಳುತ್ತಿದ್ದಾರೆ. ಆಯೋಗ ಸ್ವಾಯತೆಯ ಸಂಸ್ಥೆ. ಅದು ತನ್ನನ್ನು ತಾನು ಸಮರ್ಥಿಸಿಕೊಳ್ಳುತ್ತದೆ ಎಂದು ಹೇಳಿದರು.

ಮತ ಕಳ್ಳತನದ ಬಗ್ಗೆ ಈ ಹಿಂದೆ ಕನಾರ್ಟಕದಲ್ಲಿ ಸಾಕಷ್ಟು ದೂರುದಾಖಲಾಗಿದ್ದವು. ಚಿಲುಮೆ ಸಂಸ್ಥೆಯ ಅಕ್ರಮಗಳ ಬಗ್ಗೆ ಬಿಜೆಪಿಯ ಅವಧಿಯಲ್ಲೆ ಪ್ರಕರಣ ದಾಖಲಾಗಿತ್ತು. ಇವುಗಳನ್ನು ಮುಂದಿಟು ಕೊಂಡೇ ರಾಹುಲ್ ಗಾಂಧಿ ಪ್ರತಿಭಟನೆ ಮಾಡುತ್ತಿದ್ದಾರೆ.

ಚುನಾವಣಾ ಆಯೋಗ ಬಿಜೆಪಿಯ ಕೈಗೊಂಬೆಯಂತೆ ಕೆಲಸ ಮಾಡುತ್ತಿದೆ. ದೂರು ಎಷ್ಟು ನೀಡಿದರೂ ಕ್ರಮಕೈಗೊಳ್ಳುತ್ತಿಲ್ಲ. ಪ್ರತಿ ಭಾರಿಯೂ ಕೇಂದ್ರ ಸರ್ಕಾರದ ಅಣತಿಯಂತೆ ವರ್ತಿಸುತ್ತಿದೆ ಎಂದು ದೂರಿದರು.

ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಯಾವುದೇ ಅಕ್ರಮಗಳಿಗೆ ಅವಕಾಶ ಕೊಟ್ಟಿಲ್ಲ. ಸ್ವಾಯತೆ ಸಂಸ್ಥೆಗಳ ಮೇಲೆ ಪ್ರಭಾವ ಬೀರಲಿಲ್ಲ. ಸುಪ್ರಿಂಕೋರ್ಟ್ ಕೇಂದ್ರ ತನಿಖಾ ಸಂಸ್ಥೆಗಳ ಬಗ್ಗೆ ಪದೇಪದೇ ಟೀಕೆ ಮಾಡುತ್ತಲೇ ಇದೆ. ಅದರೆ ಅದರ ಲೋಪಗಳನ್ನು ತಿದ್ದುಕೊಳ್ಳುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು

## ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಡಾ.ಮಹಾಂತ ಶಿವಯೋಗಿಗಳ ಕೊಡುಗೆ ಅನನ್ಯ



**ಕಲಬುರಗಿ,ಅ.2–**ದುವ್ಯಸನಗಳು ಹಾಗೂ ದುಶ್ಚಟಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿ, ಮನಸ್ಸು ಪರಿವರ್ತಿಸಿ, ಜನರಲ್ಲಿನ ದುಶ್ಚಟಗಳನ್ನೇ ತಮ್ಮ ಜೋಳಿಗೆಯಲ್ಲಿ ಭಿಕ್ಷೆಯ ರೂಪದಲ್ಲಿ ಸಂಗ್ರಹಿಸಿ 'ಮಹಾಂತ ಜೋಳಿಗೆ' ಖಾತಿಯ ಇಳಕಲ್ ಪೂಜ್ಯ ಡಾ.ಮಹಾಂತ ಶಿವಯೋಗಿಗಳು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರಮಿಸಿ, ಅನನ್ಯವಾದ ಕೊಡುಗೆಯನ್ನು ನೀಡಿದ್ದಾರೆ ಎಂದು ಮುಗಳನಾಗಾಂವದ ಶ್ರೀ ಯಲ್ಲಾಲಿಂಗ ಪುಣ್ಯಾಶ್ರಮದ ಪೂಜ್ಯ ಜೇಮಸಿಂಗ ಮಹಾರಾಜ್ ಹೇಳಿದರು.

ಶಹಾಬಾದ್ ತಾಲೂಕಿನ ಮುಗಳನಾಗಾಂವನ ಮಹಾನಗರ ತಾಂಡಾದ ಸಂತ ಸೇವಾಲಾಲ್ ದೇವಸ್ಥಾನದಲ್ಲಿ ಕಲಬುರಗಿಯ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶುಕ್ರವಾರ ಸಾಯಂಕಾಲ ಜರುಗಿದ 'ಡಾ.ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ–ವ್ಯಸನಮುಕ್ತ ದಿನಾಚರಣೆ'ಯನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಗುವಿವಿ ವಿಶ್ರಾಂತ ಪ್ರಾಧ್ಯಾಪಕ ಡಾ.ವಾಸುದೇವ ಸೇಡಂ ಎಚ್. ಮಾತನಾಡಿ, ಇಂದಿನ ಯುವಕರು ಧೂಮಪಾನ, ಮದ್ಯಪಾನ, ಗುಟ್ಕಾ, ತಂಬಾಕು ಸೇವನೆ, ಮಾದಕ ವಸ್ತುಗಳ ಸೇವನೆಗೆ ಒಳಗಾಗುತ್ತಿರುವುದು ಬೇಸರದ ಸಂಗತಿಯಾಗಿದೆ. ಇದರಿಂದ ದೇಶದಲ್ಲಿಂದು ಅನೇಕ ಕುಟುಂಬಗಳು ಬೀದಿಪಾಲಾಗುತ್ತಿದ್ದು, ಕೆಟ್ಟ ವ್ಯಸನಗಳಿಂದ ಹೊರಬಂದು ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕಾಗಿದೆ ಎಂದು ನುಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ್, ಡಾ.ಮಹಾಂತ ಶ್ರೀಗಳು ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾಡಿದ್ದಾರೆ. ನಿರಂತರ ಅನ್ನ ದಾಸೋಹ, ವಚನ ಮಾಂಗಲ್ಯ, ದೇವದಾಸಿ ವಿಮೋಚನಾ ಸಂಸ್ಥೆ, ದೇವದಾಸಿಯರ ಮಕ್ಕಳಿಗೆ ಟ್ರಸ್ಟ್ ಸ್ಥಾಪನೆ, ನಿರುದ್ಯೋಗಿಗಳಿಗೆ ಮತ್ತು ವಿಧವೆಯರಿಗೆ ಕಾಯಕ ಸಂಜೀವಿನಿ ಸಂಸ್ಥೆ ಸ್ಥಾಪನೆ, ನಿಸರ್ಗ ಚಿಕಿತ್ಸೆ, ಯೋಗ ಕೇಂದ್ರ ಸ್ಥಾಪನೆ, ಶಾಖಾ ಮಠಗಳಿಗೆ ಪ.ಜಾತಿ ಮತ್ತು ಪಂಗಡಗಳ ಯುವಕರಿಗೆ ಧರ್ಮ ಸಂಸ್ಕಾರ ನೀಡಿ ಪಟ್ಟಾಭಿಷೇಕ ಮಾಡಿದ್ದು, ಮಹಿಳಾ ಸಾಧಕಿಯರಿಗೆ ಜಂಗಮ ದೀಕ್ಷೆ ನೀಡಿ ಮಠಾಧಿಕಾರಿಯನ್ನಾಗಿ ಮಾಡಿದ್ದು, ಮಠದ ನೂರಾರು ಎಕರೆ ಭೂಮಿಯನ್ನು ಆಯಾ ಗ್ರಾಮಗಳ ರೈತರಿಗೆ ಕೃಷಿ ಮಾಡಿ ಬದುಕಲು ನೀಡಿದ್ದು ಮುಂತಾದ ಹಲವು ಸಮಾಜಮುಖಿ ಕಾರ್ಯಗಳನ್ನು ಮಾಡುವ ಮೂಲಕ ಸಮಾಜಕ್ಕೆ ಮಾಸರಿಯಾಗಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಪ್ರಮುಖರಾದ ಸುರೇಶ್ ಜಾಧವ, ರವಿ ನಾಯಕ, ವಿಜಯಕುಮಾರ ರಾಠೋಡ, ನೀಲಕಂಠ ಚವ್ಹಾಣ, ಮೈರಾವಣ ರಾಠೋಡ, ಸಂಜಯ ರಾಠೋಡ, ಗೊಂವಿದ ರಾಠೋಡ, ಗಣಪತಿ ಜಾಧವ, ಹೇಮಲಾ ಜಾಧವ, ಮಹೇಶ ಚವ್ಹಾಣ, ವಿನೋದ ರಾಠೋಡ, ಕೃಷ್ಣ ರಾಠೋಡ, ಬಲರಾಮ ರಾಠೋಡ, ಅಭಿ ರಾಠೋಡ, ಅವಿನಾಶ್, ಅಜಯ್ ಸೇರಿದಂತೆ ಮತ್ತಿತರು ಭಾಗವಹಿಸಿದ್ದರು.

## ಮಾವುತ ಗುಂಡ,ಕವಾಡಿ ನಂಜುಂಡಸ್ವಾಮಿಗೆ ಅರ್ಜುನ ಆನೆ ಪ್ರಶಸ್ತಿ





**ಬೆಂಗಳೂರು,ಆ.2–** ಹಾಸನದ ಯಸಳೂರು ಬಳಿ ಪುಂಡಾನೆ ಸೆರೆ ಕಾರ್ಯಾಚರಣೆ ವೇಳೆ ಹುತಾತ್ಮನಾದ ದಸರಾ ಆನೆ ಅರ್ಜುನನ ಹೆಸರಲ್ಲಿ ವಾರ್ಷಿಕ ಪ್ರಶಸ್ತಿ ಸ್ಥಾಪಿಸಲಾಗಿದ್ದು, ಈ ಪ್ರಶಸ್ತಿಗೆ ಹಾಸನ, ಸಕಲೇಶಪುರ, ಕೊಡಗು ಮೊದಲಾದ ಕಡೆಗಳಲ್ಲಿ ಆನೆ ಮತ್ತು ವನ್ಯಜೀವಿ ಸೆರೆ ಕಾರ್ಯಚರಣೆಗಳಲ್ಲಿ ಯಶಸ್ವಿಯಾಗಿ ಭಾಗಿಯಾಗಿರುವ ಭೀಮ ಆನೆಯ ಮಾವುತ ಗುಂಡ ಹಾಗೂ ಕವಾಡಿ ನಂಜುಂಡಸ್ವಾಮಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಅರಣ್ಯ ಸಚಿವ ಈಶ್ವರಖಂಡ್ರೆ ತಿಳಿಸಿದರು.

ನಾಡಿದ್ದು ಆ.4 ಗಜಪಯಣದ ವೇಳೆ ವೀರನಹೊಸಹಳ್ಳಿಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ 2025ರ ಸಾಲಿನ ಅರ್ಜುನ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುವುದು ಎಂದು ಹೇಳಿದರು.

ಬೀದರ್ ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಚ್.ಡಿ. ಕೋಟೆ ಶಾಸಕ ಅನಿಲ್ ಕುಮಾರ್ ಸಿ ಅವರು ಅರ್ಜುನನ ಹೆಸರಲ್ಲಿ ವಾರ್ಷಿಕ ಪ್ರಶಸ್ತಿ ಸ್ಥಾಪಿಸುವ ಸಲಹೆ ನೀಡಿದ್ದರು. ಈ ಸಲಹೆ ಪುರಸ್ಕರಿಸಿ, ಮಾನವ–ವನ್ಯಜೀವಿ ಸಂಘರ್ಷ ತಡೆಗಟ್ಟುವ ಹಾಗೂ ವನ್ಯಪ್ರಾಣಿಗಳನ್ನು ಸೆರೆಹಿಡಿಯುವ ಕಾರ್ಯಚರಣೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ಕಾರ್ಯಚರಣೆಯನ್ನು ಯಶಸ್ವಿಗೊಳಿಸಿರುವ ಹಾಗೂ ಸೆರೆಹಿಡಿಯುವ ಆನೆಗಳನ್ನು ಪಳಗಿಸಿ ಆರೈಕೆ ಮಾಡುವಲ್ಲಿ ಯಶಸ್ವಿಯಾಗಿರುವ ಮಾವುತ/ಸಿಬ್ಬಂದಿಗಳನ್ನು ಗುರುತಿಸಿ ಪ್ರತಿವರ್ಷ ನಡೆಯುವ ಗಜಪಯಣದ ಸಂದರ್ಭದಲ್ಲಿ "ಅರ್ಜುನ ಆನೆ" ಪ್ರಶಸ್ತಿ ಪ್ರದಾನ ಮಾಡಲು ತೀರ್ಮಾನಿಸಲಾಗಿದೆ ಎಂದರು. 1968ರಲ್ಲಿ ಕಾಕನಕೋಟೆಯಲ್ಲಿ ನಡೆದ ಖೆಡ್ಡಾ ಕಾರ್ಯಾಚರಣೆಯಲ್ಲಿ ಸೆರೆಹಿಡಿಯಲಾಗಿದ್ದ ಅರ್ಜುನ 22 ಬಾರಿ ಜಂಬೂಸವಾರಿಯಲ್ಲಿ ಭಾಗಿಯಾಗಿ, 8 ಬಾರಿ 750 ಕೆ.ಜಿ. ತೂಕದ ಚಿನ್ನದ ಅಂಬಾರಿಯನ್ನು ಹೊತ್ತು, ದೇಶದ ಜನರ ಮನ ಗೆದ್ದಿದ್ದ. ಅರಣ್ಯ ಸಿಬ್ಬಂದಿಯ ಪ್ರಾಣ ಉಳಿಸಲು ಪ್ರಾಣ ತ್ಯಾಗ ಮಾಡಿದ ಅರ್ಜುನನ ಹೆಸರು ಚಿರಸ್ಥಾಯಿಯಾಗಿ ಉಳಿಯುವಂತೆ ಈ ಪ್ರಶಸ್ತಿ ಸ್ಥಾಪಿಸಲಾಗಿದೆ ಎಂದರು.

## ನಟಿ ರಮ್ಯಾಗೆ ಅವಹೇಳನಕಾರಿ ಸಂದೇಶ ಕಳುಹಿಸಿದ್ದ ಮೂವರು ಕಿಡಿಗೇಡಿಗಳ ಬಂಧನ



**ಬೆಂಗಳೂರು,ಆ.2–** ಸಾಮಾಜಿಕ ಜಾಲತಾಣದಲ್ಲಿ ನಟಿ ರಮ್ಯಾಗೆ ಅವಹೇಳನಕಾರಿ ಸಂದೇಶ ಕಳುಹಿಸಿದ್ದ ಮೂವರು ಕಿಡಿಗೇಡಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಕೋಲಾರ, ಚಿತ್ರದುರ್ಗ ಮೂಲದ ಮೂವರನ್ನು ಬಂಧಿಸಲಾಗಿದೆ. ಈ ಮೂವರು ಅಶ್ಲೀಲ ಕಮೆಂಟ್ ಹಾಕಿ ಸವಾಲ್ ಹಾಕಿದ್ದರು.


ನಟಿ ರಮ್ಯಾ ದೂರು ನೀಡುವ ವೇಳೆ 43 ಅಕೌಂಟ್‌ಗಳ ಹೆಸರು ಉಲ್ಲೇಖಿಸಿ ದೂರು ದಾಖಲಿಸಿದ್ದರು. ಐಪಿ ಅಡ್ರೆಸ್ ಆಧರಿಸಿ ಪ್ರಕರಣದಲ್ಲಿ ಮೂವರನ್ನು ಬಂಧಿಸಿ ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಎಫ್ಐ ಆರ್ ದಾಖಲಾದ ತಕ್ಷಣ ಬಹುತೇತ ಅಕೌಂಟ್‌ಗಳು ಡಿಲೀಟ್ ಆಗಿದ್ದವು. ಅಷ್ಟರಲ್ಲಿ ಪೊಲೀಸರು ಸಂಬಂಧಪಟ್ಟ ಸಂಸ್ಥೆಗಳಿಗೆ ಪತ್ರ ಬರೆದು ಐಪಿ ಅಡ್ರೆಸ್‌ಗಳು ,ಅಕೌಂಟ್ ಡಿಟೇಲ್ ಕೊಡುವಂತೆ ಮನವಿ ಮಾಡಿದ್ದರು.ಇದರಿಂದಾಗಿ ಪ್ರಕರಣಕ್ಕೆ ಸಂಬಂಧಿಸಿದಂತೆ 40 ಮಂದಿಯ ಚಹರೆ ಗುರುತು ಮಾಡಲಾಗಿದೆ ಎಂದು ತಿಳಿದು ಬಂದಿದೆ.

ಇನ್ನು ಹಲವರ ಪತ್ತೆಗೆ ಕಾರ್ಯಾಚರಣೆ ನಡೆಯುತ್ತಿದ್ದು,ಇಂದು ರಾತ್ರಿ ವೇಳೆಗೆ ಇನ್ನು ಹಲವರನ್ನು ಬಂಧಿಸುವ ಸಾಧ್ಯತೆ ಇದೆ. ಈ ನಡುವೆ ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರು ಮೂವರ ಬಂಧನ ಖಚಿತ ಪಡಿಸಿದ್ದು. ನಟಿ ರಮ್ಯಾ ಅವರಿಗೆ ಸೋಷಿಯಲ್ ಮೀಡಿಯಾದಲ್ಲಿ ಅಶ್ಲೀಲ ಕಾಮೆಂಟ್ ಮಾಡಿದ ಇಬ್ಬರು ಕಿಡಿಗೇಡಿಗಳನ್ನ ಬಂಧಿಸಲಾಗಿದೆ. 11 ಮಂದಿಯನ್ನ ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಈ ವೇಳೆ ಮಾತನಾಡಿದ ಅವರು ಸೋಷಿಯಲ್ ಮೀಡಿಯಾ ಕಾಮೆಂಟ್ ಬಗ್ಗೆ ಪರಿಶೀಲನೆ ಮಾಡಿದ್ದೇವೆ. ಸಿಸಿಬಿಯವರು ಹಲವರನ್ನ ಗುರುತಿಸಿದ್ದಾರೆ. ಕೆಲವರ ಸ್ಪಷ್ಟ ಮಾಹಿತಿ ಸಿಕ್ಕಿದೆ, ಇಬ್ಬರನ್ನು ಅರೆಸ್ಟ್ ಮಾಡಿದ್ದೇವೆ. ಇನ್ನೂ ಹನ್ನೊಂದು ಜನರ ಮಾಹಿತಿ ಸಿಕ್ಕಿದ್ದು ತನಿಖೆ ನಡೆಯುತ್ತಿದೆ ಎಂದರು.

ಅಲ್ಲದೇ ಬಂಧಿತರು ಯಾರ ಅಭಿಮಾನಿ ಅನ್ನೊದರ ಬಗ್ಗೆ ತನಿಖೆ ನಡೆಯುತ್ತಿದೆ. ಯಾರೇ ಆಗಿರಲಿ ಅಶ್ಲೀಲ ಸಂದೇಶ ಹಾಕಿದರೆ ಕಠಿಣ ಕ್ರಮ ಕೈಗೊಳ್ಳುತೇವೆ. ಈ ಬಗ್ಗೆ ಸೈಬರ್ ಪೊಲೀಸರಿಗೆ ವಿಶೇಷ ತರಬೇತಿ ನೀಡಿದ್ದೇವೆ. ಅವಹೇಳನಕಾರಿಯಾಗಿ ಯಾರೇ ಸಂದೇಶ ಹಾಕಿದರೂ ಅವರ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಎಚ್ಚರಿಸಿದ್ದಾರೆ.

## ತಪ್ಪಿತಸ್ಥ ವಾರ್ಡನ್ ಅಮಾನತು ಮಾಡಲು ಡಿವಿಪಿ ಆಗ್ರಹ



**ಕಲಬುರಗಿ,ಅ.2–**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ನಗರದ ಇಂದಿರಾಗಾಂಧಿ ಮಹಿಳಾ ನಸಿರ್‌ಂಗ್ ವಸತಿ ನಿಲಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯೊಬ್ಬರು "ಊಟ ಸರಿಯಾಗಿ ನೀಡುತ್ತಿಲ್ಲ. ಉತ್ತಮ ಗುಣಮಟ್ಟದ ಆಹಾರ ನೀಡುವಂತೆ ವಾಡರ್ನ್ ಗೆ ಪ್ರಶ್ನೆ ಮಾಡಿದ್ದಕ್ಕೆ. ವಾರ್ಡನ್ ಕಪಾಳಕ್ಕೆ ಹೊಡೆದಿದ್ದು ದಲಿತ ವಿದ್ಯಾರ್ಥಿ ಪರಿಷತ್ ತೀವ್ರವಾಗಿ ಖಂಡಿಸುತ್ತದೆ ಎಂದು ನಗರ ಘಟಕದ ಸಂಚಾಲಕ ಸಚಿನ್ ಈ ಕುರಿತು ಆಕ್ರೋಶ ವ್ಯಕ್ತಪಡಿಸಿದರು.

ಸದರಿ ಘಟನೆ ಕುರಿತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರನ್ನು ಮನವಿ ಸಲ್ಲಿಸಿ ಮಾತನಾಡುತ್ತ, ತಮ್ಮ ನ್ಯಾಯಯುತ ಹಕ್ಕು ಕೇಳಿದ ವಿದ್ಯಾರ್ಥಿನಿಯ ಮೇಲೆ ಹೇಗೆ ಹಲ್ಲೆ ನಡೆಸಿದರೆ ಅವರ ಮಾನಸಿಕ ಆರೋಗ್ಯದ ಮೇಲೆ ತುಂಬಾ ದುಷ್ಟ ಪರಿಣಾಮ ಬೀರುತ್ತದೆ. ಇದರಿಂದಾಗಿ ವಸತಿ ನಿಲಯದ ಇನ್ನಿತರ ವಿದ್ಯಾರ್ಥಿನಿಯರಿಗೆ ಆತಂಕ, ಭಯ ಮತ್ತು ನಂಬಿಕೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗುತ್ತದೆ.

ಇದು ಶಿಕ್ಷಣ ವ್ಯವಸ್ಥೆ ಶಿಸ್ತು ಮತ್ತು ವಿದ್ಯಾರ್ಥಿನಿಯ ಹಕ್ಕುಗಳನ್ನು ಉಲ್ಲಂಘಿಸುವ ಗಂಭೀರ ವಿಚಾರವಾಗಿರುತ್ತದೆ.ಹೀಗಾಗಿ, ಈ ಘಟನೆಯ ಬಗ್ಗೆ ಸಂಪೂರ್ಣ ತನಿಖೆ ನಡೆಸಿ, ವಿದ್ಯಾರ್ಥಿನಿಯ ಮೇಲೆ ಹಲ್ಲೆ ನಡೆಸಿದ ವಸತಿ ನಿಲಯದ ಪಾಲಕರ ವಿರುದ್ಧ ಸೂಕ್ತ ಕಾನೂನು ಕ್ರಮಕೈಗೊಳ್ಳಬೇಕು. ಮತ್ತು ಕೊಡಲೇ ಇವರನ್ನು ಅಮಾನತ್ತನಲ್ಲಿಟ್ಟು ಸೂಕ್ತ ತನಿಖೆಗೆ ಆದೇಶ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಈ ವೇಳೆ ಪರಿಷತ್ ಮುಖಂಡರಾದ ಯಮನೂರಿ ಸಿಂದಗೇರಿ ಅಲ್ಲದೇ ಇನ್ನಿತರ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಚಿವ ಜಮೀರ್ ಹುಟ್ಟುಹಬ್ಬ: ರೋಗಿಗಳಿಗೆ ಹಣ್ಣು, ಬ್ರೆಡ್ ವಿತರಣೆ

ಹಗರಿಬೊಮ್ಮನಹಳ್ಳಿ.ಆ.2– ರಾಜ್ಯದ ವಸತಿ ಸಚಿವ ಹಾಗೂ ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಅವರ 59 ನೇ ವರ್ಷದ ಹುಟ್ಟು ಹಬ್ಬದ ಪ್ರಯುಕ್ತ ಮಾಜಿ ಶಾಸಕ ಶಿರಾಜ್ ಶೇಕ್ ಅಭಿಮಾನಿ ಬಳಗದಿಂದ ರೋಗಿಗಳಿಗೆ ಹಾಲು, ಹಣ್ಣು ಬ್ರೆಡ್ ವಿತರಿಸಲಾಯಿತು.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಒಳ, ಹೊರ ರೋಗಿಗಳಿಗೆ ಹಾಲು, ಹಣ್ಣು ಬ್ರೆಡ್ ವಿತರಣೆ ಮಾಡಿ ಅಭಿಮಾನಿ ಬಳಗದ ಸುರೇಶ ರಾಥೋಡ್ ಮಾತನಾಡಿ ಸಚಿವರಾದ ಜಮೀರ್ ಸರ್ ಅವರಿಗೆ ಒಳ್ಳೆಯ ಅರೋಗ್ಯ, ಆಯುಷ್ಯ ವೃದ್ಧಿಸಲಿ ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಉತ್ತಮ ಕೆಲಸ ಮಾಡುವ ಮೂಲಕ ರಾಜ್ಯಕ್ಕೆ ಒಳ್ಳೆಯ ಹೆಸರು ಮಾಡಲಿ ಎಂದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಹುಡೇದ್ ಗುರುಬಸವರಾಜ್,ಸೈಯದ್ ಯೂಸುಫ್, ಎಣ್ಣೆ ಭಾಷ,ರೋಶನ್,ಹನುಮಜ್ಜ, ರಾಜಸಾಬ್, ಅಭಿಬುಲ್ಲಾ ಸಾಬ್,ಸೋಗಿ ಕೊಟ್ರೇಶ್ ಅಂಬೇಡ್ಕರ್ ಸಂಘದ ತಾಲೂಕು ಅಧ್ಯಕ್ಷ ದೊಡ್ಡಬಸಪ್ಪ, ಕಡಿಗಿ ದಾದಾಪೀರ್, ಶಾಬುದ್ದಿನ್, ಸುಭಾನ್ ಹಲಿ, ಮಹಮದ್ ಸಾಬ್,ಕಾಸಿಂ ಸಾಬ್, ಲೋಕಪ್ಪ, ದೊಡ್ಡಬಸಪ್ಪ,ಗುಲ್ಜಾರ್, ಇತರರಿದ್ದರು.

## ರಾಹುಲ್‌ಗಾಂಧಿ ಪ್ರತಿಭಟನೆಗಾಗಿ ಮರ ಕಡಿದ ಪೊಲೀಸರ ವಿರುದ್ಧ ಎಫ್‌ಐಆರ್

**ಬೆಂಗಳೂರು, ಆ.2–** ಮತಕಳ್ಳತನ ಹೆಸರಿನಲ್ಲಿ ನಗರದಲ್ಲಿ ರಾಹುಲ್‌ಗಾಂಧಿ ನಡೆಸಲು ತೀರ್ಮಾನಿಸಿರುವ ಪ್ರತಿಭಟನೆಗಾಗಿ ಅನುಮತಿ ಇಲ್ಲದೆ ಫ್ರಿಡಂ ಪಾರ್ಕ್‌ನಲ್ಲಿದ್ದ ಮರ ಕಡಿದಿರುವ ಉಪ್ಪಾರಪೇಟೆ ಪೊಲೀಸರ ವಿರುದ್ಧ ಬಿಬಿಎಂಪಿ ಎಫ್‌ಐಆರ್ ದಾಖಲಿಸಿದೆ.

ಮರ ಕಡಿದಿರುವುದಕ್ಕೆ ಸಾರ್ವಜನಿಕರಿಂದ ತೀವ್ರ ಆಕ್ರೊಶ ವ್ಯಕ್ತವಾದ ಬೆನ್ನಲ್ಲೆ ಎಚ್ಚೆತ್ತುಕೊಂಡಿರುವ ಬಿಬಿಎಂಪಿ ಅಧಿಕಾರಿಗಳು ಉಪ್ಪಾರಪೇಟ್ ಪಿಸಿ ಮಹದೇವಸ್ವಾಮಿ ಎಂಬುವರ ವಿರುದ್ಧ ಪ್ರಕರಣ ದಾಖಲಿಸಿದೆ.ಆ.5 ರಂದು ರಾಹುಲ್‌ಗಾಂಧಿ ಪ್ರತಿಭಟನೆಗಾಗಿ ಫ್ರಿಡಂ ಪಾರ್ಕ್‌ನ ಕಾಂಪೌಂಡ್ ಒಡೆದು, ಕೆಲ ಮರ ಕಡಿದು ರಸ್ತೆ ನಿರ್ಮಾಣ ಮಾಡಲು ಪೊಲೀಸರು ಮುಂದಾಗಿದ್ದರು.

ಇದೀಗ ರಾಜಕಾರಣಿಗಳ ಸಲುವಾಗಿ ಮರಗಳ ಬುಡಕ್ಕೆ ಕೊಡಲಿ ಇಟ್ಟಿರೋದು ಸಾರ್ವಜನಿಕರ ಆಕ್ರೊ?ಶಕ್ಕೆ ಕಾರಣವಾಗಿದೆ. ಈ ಪ್ರತಿಭಟನೆಯಲ್ಲಿ ರಾಹುಲ್ ಗಾಂಧಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಕಾಂಗ್ರೆಸ್ ರಾಷ್ಟ್ರಿಯ ನಾಯಕರು ಭಾಗಿಯಾಗುತ್ತಿದ್ದಾರೆ.

ಈ ಪ್ರತಿಭಟನೆಯಗೆ ರಾಜ್ಯದ ವಿವಿಧ ಭಾಗಗಳಿಂದ ಸಾವಿರಾರು ಮಂದಿ ಬರುತ್ತಿದ್ದಾರೆ. ಹಾಗಾಗಿ ಪ್ರತಿಭಟನೆಗೆ ಹೆಚ್ಚಿನ ಜಾಗದ ಅವಶ್ಯಕತೆ ಇರುವುದನ್ನು ಮನಗಂಡು ಮರ ಕಡಿದು ಜಾಗ ವಿಸ್ತರಣೆ ಮಾಡಲಾಗುತ್ತಿದೆ.

ಯುವ ಮಾರ್ಗ

ಭಾನುವಾರ : 03–08–2025

## ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ: ಸ್ವಚ್ಛತೆಗಾಗಿ ಪಾಲಿಕೆಯ ಅಧಿಕಾರಿ, ಸಿಬ್ಬಂದಿಯ ನಿಯೋಜನೆ

**ರಾಯಚೂರು,ಆ.02–**ಇಲ್ಲಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕ್ರೀಡಾಂಗಣದಲ್ಲಿ ಆಗಸ್ಟ್ 08 ರಿಂದ ಆಗಸ್ಟ್ 25 ರವರೆಗೆ ನಡೆಯಲಿರುವ ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಹಿನ್ನೆಲೆಯಲ್ಲಿ ಮಹಾನಗರ ಪಾಲಿಕೆಯಿಂದ ಸ್ವಚ್ಛತೆ ಹಾಗೂ ಕುಡಿಯುವ ನೀರು ಮತ್ತು ಮೊಬೈಲ್ ಟಾಯ್ಲೆಟ್ ವ್ಯವಸ್ಥಿತವಾಗಿ ನಿರ್ವಹಿಸಲು ಮಹಾನಗರ ಪಾಲಿಕೆಯ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ನಿಯೋಜಿಸಿ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಆದೇಶ ಹೊರಡಿಸಿದ್ದಾರೆ.

ಆಗಸ್ಟ್ 08 ರಿಂದ ಆಗಸ್ಟ್ 25 ರವರೆಗೆ ಕೃಷಿ ವಿಶ್ವವಿದ್ಯಾಲಯದಲ್ಲಿ ಮೊಬೈಲ್ ಟಾಯ್ಲೆಟ್‌ಗಳನ್ನು ಸ್ವಚ್ಛಗೊಳಿಸಲು ಹಾಗೂ ಸಕ್ಕಿಂಗ್ ಮತ್ತು ಜೆಟ್ಟಿಂಗ್ ಮಿಷನ್ ವಾಹನ ನಿಯೋಜಿಸುವುದು. ಹಾಗೂ ಇನ್ನಿತರ ಕಾರ್ಯಗಳನ್ನು ನಿರ್ವಹಿಸಲು ಪಾಲಿಕೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ಭೀಮಾಶಂಕರ ಹಾಗೂ ಸಿಬ್ಬಂದಿ ಆಂಜನೇಯ ಮತ್ತು ಶ್ರೀಕಾಂತ್ ಅವರನ್ನು ನೇಮಿಸಲಾಗಿದೆ.

ಕೃಷಿ ವಿಶ್ವವಿದ್ಯಾಲಯದಲ್ಲಿ ಸ್ವಚ್ಛತೆ ಕುರಿತು ತಮ್ಮ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ವಚ್ಛತಾ ಸಿಬ್ಬಂದಿಯಾದ ಪೌರಕಾರ್ಮಿಕರನ್ನು ಕಸಗುಡಿಸಲು ಹಾಗೂ ವಾಹನ ಸಂಪನ್ಮೂಲಗಳನ್ನು ಕಾರ್ಯಕ್ರಮಕ್ಕೆ ಅನುಗುಣವಾಗಿ ನಿಯೋಜಿಸಿ ಸ್ವಚ್ಛಗೊಳ್ಳಲು ಆಗಸ್ಟ್ 8ರಿಂದ ಆಗಸ್ಟ್ 25ರವರೆಗೆ ಪ್ರತಿನಿತ್ಯ ಆರ್ಮಿ ರ್‍ಯಾಲಿ ನಡೆಯುವ ಕೃಷಿ ವಿವಿ ಆವರಣವನ್ನು ಶುಚಿಗೊಳಿಸುವುದು ಸೇರಿದಂತೆ ಇನ್ನಿತರ ಕಾರ್ಯವನ್ನು ನಿರ್ವಹಿಸಲು

ಪರಿಸರ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಜೈಪಾಲ್ ರೆಡ್ಡಿ ಹಾಗೂ ಸಿಬ್ಬಂದಿ ಶರಣು ತೆಂಗಲಿ, ಅಮರೇಶ್, ಹನುಮಂತ ಜಗ್ಲಿ, ಬಡೇಸಾಬ್, ಈರಣ್ಣ ಅವರನ್ನು ನೇಮಿಸಲಾಗಿದೆ.

ಪಾಲಿಕೆಯ ಎಲ್ಲಾ ಮೇಲ್ವಿಚಾರಕರು ಅವರ ದಿನದಲ್ಲಿ ಕಾರ್ಯ ನಿರ್ವಹಿಸಿರುವ ಪೌರಕಾರ್ಮಿಕರನ್ನು ಆರ್ಮಿ ರ್‍ಯಾಲಿಗೆ ನಿಯೋಜಿಸಲು ಸೂಕ್ತವಾಗಿ ಆರೋಗ್ಯ ನಿರೀಕ್ಷಕರ ಸೂಚನೆಗಳಂತೆ ಪಾಲಿಸಬೇಕು. ತಂಡಗಳಾಗಿ ಕಾರ್ಯನಿರ್ವಹಿಸಲು ಕ್ರಮ ವಹಿಸಬೇಕು ಎಂದು ಪರಿಸರ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಜೈಪಾಲ್ ರೆಡ್ಡಿ ಹಾಗೂ ಎಸ್‌ಡಬ್ಲುಎಂನ ಎಕ್ಸಪರ್ಟ್ ಮೊಹಮ್ಮದ್ ಶಫಿ ಹಾಗೂ ಸಿಬ್ಬಂದಿ ಮಣಿಕಂಠ, ಭೀಮೇಶ್, ಸಚಿನ್ ಸೂಪರ್ವೈಸರ್ ಅವರಿಗೆ ಜವಾಬ್ದಾರಿ ಹಂಚಿಕೆ ಮಾಡಲಾಗಿದೆ. ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯು ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ ಹಿನ್ನೆಲೆಯಲ್ಲಿ ನೀಡಿದ ಕಾರ್ಯವನ್ನು ನಿರ್ವಹಣೆ ಮಾಡಬೇಕು. ತಪ್ಪಿದ್ದಲ್ಲಿ ಕರ್ನಾಟಕ ಮಹಾನಗರ ಪಾಲಿಕೆಯ ನಿಯಮಗಳ ಕಾಯ್ದೆ–1976 ಅನ್ವಯ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಪಾಲಿಕೆಯ ಆಯುಕ್ತರು ಆದೇಶದಲ್ಲಿ ತಿಳಿಸಿದ್ದಾರೆ.

## ಸಮಾಜವನ್ನು ಶುಚಿಗೊಳಿಸುವ ಕೆಲಸ ಪತ್ರಿಕಾರಂಗ ಮಾಡುತ್ತಿದೆ



**ಔರಾದ್ ,ಆ.02–**ಸಮಾಜದಲ್ಲಿ ಅಧರ್ಮ, ಅನೀತಿ, ಭ್ರಷ್ಟಾಚಾರ ತಾಂಡವವಾಡುವಾಗ ಆ ಸಮಾಜವನ್ನು ಶುಚಿಗೊಳಿಸುವ ಕಾರ್ಯ ಪತ್ರಿಕಾರಂಗ ಮಾಡುತ್ತಿದೆ ಇಡೀ ಸಮಾಜಕ್ಕೆ ಗುರುವಾಗಿ ಪತ್ರಿಕಾ ಮಾಧ್ಯಮ ನಿಂತಿದೆ ಎಂದು ಸಾಹಿತಿ ಓಂಪ್ರಕಾಶ ದಡ್ಡೆ ಹೇಳಿದರು.

ಪಟ್ಟಣದ ಕನ್ನಡ ಭವನದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣಶೆಟ್ಟಿ ಬಣ) ವತಿಯಿಂದ ನಡೆದ ಪತ್ರಿಕಾ ದಿನಾಚರಣೆಯಲ್ಲಿ ಉಪನ್ಯಾಸ ನೀಡಿದ ಅವರು ಹೇಗೆ ಭೂಲೋಕದಲ್ಲಿ ಅಧರ್ಮ ಹೆಚ್ಚಾದಾಗ ಭಗವಂತ ಅವತಾರ ತಾಳಿ ಸೃಷ್ಟಿಯನ್ನು ಕಾಪಾಡುತ್ತಾನೆಯೋ ಹಾಗೆ ಸಮಾಜದಲ್ಲಿ ಅನ್ಯಾಯ, ಭ್ರಷ್ಟಾಚಾರ, ಅನಾಚಾರಗಳ ವಿರುದ್ಧ ಧ್ವನಿ ಎತ್ತಿ ಸಮಾಜ ಶುದ್ಧಿಗೆ ಪತ್ರಿಕಾ ರಂಗ ಕೆಲಸ ಮಾಡುತ್ತಾ ಬಂದಿದೆ, ಪತ್ರಕರ್ತರು ಸಹ ತಮ್ಮ ಜೀವನವನ್ನು ತ್ಯಾಗ ಮಾಡುವ ಮೂಲಕ ಸಮಾಜ ತಿದ್ದುವ ಕಾರ್ಯದಲ್ಲಿ ತೊಡಗಿದ್ದಾರೆ ಪತ್ರಕರ್ತರ ಲೇಖನಿಗೆ ದೊಡ್ಡ ಶಕ್ತಿ ಇದೆ, ಪತ್ರಿಕಾ ಜವಾಬ್ದಾರಿ ಶ್ರೇಷ್ಠವಾದದ್ದು, ಜಾತಿಗೆ ಒಬ್ಬ ಗುರು ಇದ್ದರೆ, ಪತ್ರಿಕಾ ಮಾಧ್ಯಮ ಇಡೀ ಸಮಾಜಕ್ಕೆ ಗುರುವಾಗಿ ನಿಂತಿದೆ ಎಂದು ತಿಳಿಸಿದರು.

ಪತ್ರಕರ್ತ ಅನಿಲಕುಮಾರ ದೇಶಮುಖ ಮಾತನಾಡಿ ಪತ್ರಕರ್ತರನ್ನು ಪ್ರಚಾರಕ್ಕಾಗಿ ಬಳಸಿಕೊಳ್ಳದೆ ಅವರನ್ನು ಗೌರವಿಸುವ ಕಾರ್ಯ ಮಾಡುತ್ತಿರುವ ಕರ್ನಾಟಕ ರಕ್ಷಣಾ ವೇದಿಕೆ ಕಾರ್ಯ ಶ್ಲಾಘನೀಯವಾದ್ದು, ಪತ್ರಕರ್ತರು ಸಹ ಜವಾಬ್ದಾರಿ ಹೊತ್ತು ಸಮಾಜದ ಒಳಿತಿಗಾಗಿ ಕಾರ್ಯ ಮಾಡಬೇಕು. ಇವತ್ತು ಸನ್ಮಾನ ಆಗಿದೆ ಅಂದ್ರೆ ನಮ್ಮ ಮೇಲೆ ಜವಾಬ್ದಾರಿ ಹೆಚ್ಚಿದೆ ಅಂತ ತಿಳಿಯಬೇಕು ಅದರಂತೆ ನಾವು ಪತ್ರಕರ್ತರು ಆತ್ಮಾವಲೋಕನ ಮಾಡಿಕೊಂಡು ಅಧ್ಯಯನಶೀಲರಾಗಿ ಕಾರ್ಯಪ್ರವೃತ್ತರಾಗಬೇಕು ಎಂದು ತಿಳಿಸಿದರು.ಸಾನಿಧ್ಯ ವಹಿಸಿದ ಗದಗ ವೀರೇಶ್ವರ ಪುಣ್ಯಾಶ್ರಮದ ವೇದಮೂರ್ತಿ ನವೀನ ಶಾಸ್ತ್ರಿಗಳು ಮಾತನಾಡಿ ಗಡಿಯಲ್ಲಿ ನಿಂತ ಯೋಧರು ದೇಶವನ್ನು ಕಾಯುತ್ತಾರೆ ಅದೇ ರೀತಿ ಸಮಾಜದಲ್ಲಿ ನಿಂತ ಪತ್ರಕರ್ತರು ಸಮಾಜವನ್ನು ಕಾಪಾಡುತ್ತಾರೆ ಪ್ರಜಾಪ್ರಭುತ್ವದ ನಾಲ್ಕು ಅಂಗಗಳಲ್ಲಿ ಪತ್ರಿಕಾಂಗ ಶ್ರೇಷ್ಠವಾದದ್ದು ಎಂದರು. ಈ ವೇಳೆ ತಾಲೂಕಿನ ಮುದ್ರಣ ಹಾಗೂ ದೃಶ್ಯ ಮಾಧ್ಯಮ ಮಿತ್ರರನ್ನು ಸನ್ಮಾನಿಸಿ ಗೌರವಿಸಲಾಯಿತು.

## ರಾಯಚೂರು ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಭೇಟಿ : ಪರಿಶೀಲನೆ

ಯುವ ಮಾರ್ಗ ಸುದ್ದಿ



**ರಾಯಚೂರು,ಆ.2–**ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ಆಗಸ್ಟ್ 1ರಂದು, ರಾಯಚೂರಿನಲ್ಲಿ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯ ಉದ್ದೇಶಿತ ಸ್ಥಳವಾದ ಯರಮರಸ್ ಹೊರವಲಯದ ಪ್ರದೇಶಕ್ಕೆ ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದರು.

ಪ್ರಸ್ತುತ ವಿಮಾನ ನಿಲ್ದಾಣದ ಬಾಂಡರಿ ನಿರ್ಮಾಣ ಕಾಮಗಾರಿ ಹಾಗೂ ಪ್ಯಾಸೆಂಜರ್ ಟರ್ಮಿನಲ್ ಕಟ್ಟಡಕ್ಕೆ ಬುನಾದಿ ಫೂಟಿಂಗ್ ಹಾಕುವ ಕಾಮಗಾರಿಯ ಪರಿವೀಕ್ಷಣೆ ನಡೆಸಿದರು. ವಿಮಾನ ನಿಲ್ದಾಣ ಕಾಮಗಾರಿಯಲ್ಲಿ ಪ್ರಸ್ತಾಪಿಸಿರುವ ರನ್‌ವೇ, ಸಿಆರ್‌ಎಫ್ ಕಟ್ಟಡ, ಎಟಿಸಿ ಕಟ್ಟಡ ಮತ್ತು ಮಾಸ್ಟರ್ ಪ್ಲಾನ್‌ದಲ್ಲಿ ತೋರಿಸಿದಂತೆ ಸದರಿ ಸ್ಥಳದ ವೀಕ್ಷಣೆ ನಡೆಸಿದರು.

ಕಾಮಗಾರಿಯ ಪ್ರಗತಿಯ ಬಗ್ಗೆ ಇದೆ ವೇಳೆ ಗುತ್ತಿಗೆದಾರರೊಂದಿಗೆ ಚರ್ಚಿಸಿದ ಜಿಲ್ಲಾಧಿಕಾರಿಗಳು, ಕಾಮಗಾರಿಯನ್ನು ತ್ವರಿತಗೊಳಿಸಿ ಬೇಗನೆ ಪೂರ್ಣಗೊಳಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಾಘವೇಂದ್ರ, ಮಹೇಶಕುಮಾರ ಹಾಗೂ ಸಂಬಂಧಿಸಿದ ಗುತ್ತಿಗೆದಾರರ ಎಂಜಿನಿಯರು ಇದ್ದರು.

## ವಿಶ್ವ ಸ್ತನ್ಯಪಾನ ಸಪ್ತಾಹಕ್ಕೆ ಚಾಲನೆ
## ಹೆರಿಗೆ ನಂತರ ಮಗುವಿಗೆ ಆರು ತಿಂಗಳವರೆಗೆ ತಪ್ಪದೆ ಎದೆಹಾಲು ಮಾತ್ರ ನೀಡಿ: ಡಿಎಚ್‌ಓ ಡಾ.ಸುರೇಂದ್ರ ಬಾಬು ಸಲಹೆ



ಯುವ ಮಾರ್ಗ ಸುದ್ದಿ

**ರಾಯಚೂರು,ಆ.2–**ಬಾಲ್ಯದಲ್ಲಿ ಮಗುವಿನ ಆರೋಗ್ಯವನ್ನು ಸದೃಢ ಮಾಡಿದಾಗ ಭವಿಷ್ಯದಲ್ಲಿ ಸಶಕ್ತ ವ್ಯಕ್ತಿಯನ್ನು ರೂಪಿಸಲು ಸಾಧ್ಯ. ಇದಕ್ಕಾಗಿ ಹೆರಿಗೆ ನಂತರದಲ್ಲಿ ಮೊದಲ ಅರ್ಧ ಗಂಟೆಯೊಳಗೆ ತಕ್ಷಣವೇ ಸ್ತನ್ಯಪಾನ ಮಾಡಿಸಲು ಮರೆಯಬಾರದು. ಇದಕ್ಕಾಗಿ ಪಾಲಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು ಮನವಿ ಮಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ ಕಾರ್ಯಕ್ರಮ, ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿ ರಾಯಚೂರು ರವರ ಸಂಯುಕ್ತಾಶ್ರಯದಲ್ಲಿ ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆಗಸ್ಟ್ 1ರಂದು ನಡೆದ ವಿಶ್ವ ಸ್ತನ್ಯ ಪಾನ ಸಪ್ತಾಹ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಅನಾದಿ ಕಾಲದಿಂದಲೂ ತಾಯಿಯ ಎದೆ ಹಾಲು ಅಮೃತಕ್ಕೆ ಸಮಾನ ಎನ್ನುವುದು ಜನಸಾಮಾನ್ಯರಲ್ಲಿ ಬೇರುಬಿಟ್ಟಿದ್ದರೂ ಕೆಲವರು ಮಗುವಿನ ಆರೋಗ್ಯಕ್ಕೆ ಹಾನಿ ಮಾಡಬಹುದಾದ ಸಕ್ಕರೆ ನೀರು, ಬೆಲ್ಲದ ನೀರು ಜೇನುತುಪ್ಪ ಕೊಡುತ್ತಾರೆ. ಕುಟುಂಬಕ್ಕೆ ಇಂತಹ ತಪ್ಪು ಮಾಹಿತಿಯನ್ನು ಯಾರಾದರೂ ನೀಡಿದರೆ ದಯವಿಟ್ಟು ಅದನ್ನು ತಿರಸ್ಕರಿಸಬೇಕು. ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಮಕ್ಕಳ ತಜ್ಞರು ಕಾರ್ಯ ನಿರ್ವಹಿಸುತ್ತಿದ್ದು ಎಲ್ಲ ಖಾಯಿಲೆಗಳಿಗೆ ಅಗತ್ಯ ಚಿಕಿತ್ಸೆ ಔಷಧೋಪಚಾರ ನೀಡಲಾಗುತ್ತಿದ್ದು ಇದರ ಸದುಪಯೋಗ ಪಡೆಯಲು ವಿನಂತಿಸಿದರು.

ಎಮ್.ಎನ್, ಜಿಲ್ಲಾ ಸಂತಾನೋತ್ಪತ್ತಿ ಮತ್ತು ಆರೋಗ್ಯ ಅಧಿಕಾರಿಗಳಾದ ಡಾ.ನಂದಿತಾ ಅವರು ಪ್ರಾಸ್ತಾವಿಕ ಮಾತನಾಡಿ, ತಾಯಿ ಎದೆ ಹಾಲು ನೀಡುವುದರಲ್ಲಿ ಹೂಡಿಕೆ ಮಾಡಿದರೆ ಮಕ್ಕಳ ಆರೋಗ್ಯಕರ ಭವಿಷ್ಯಕ್ಕಾಗಿ ಹೂಡಿಕೆ ಮಾಡಿದಂತೆ ಎಂಬುದು ಈ ವರ್ಷದ ಘೋಷಣೆಯಾಗಿದ್ದು, ಇದು ಮಗುವಿನ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಕಾರಿಯಾಗುತ್ತದೆ. ಮಗುವಿನ ಆರೋಗ್ಯಕ್ಕಾಗಿ ಹಣ ವೆಚ್ಚ ಮಾಡುವುದನ್ನು ತಪ್ಪಿಸಲು ಹೆರಿಗೆ ನಂತರದಲ್ಲಿ ಮೊದಲ ಅರ್ಧ ಗಂಟೆಯೊಳಗೆ ತಕ್ಷಣವೇ ಸ್ತನ್ಯಪಾನ ಮಾಡಿಸಬೇಕು ಎಂಬುದನ್ನು ಅರಿಯಬೇಕು ಎಂದರು.

ಹೆರಿಗೆ ನಂತರದಲ್ಲಿ ತಕ್ಷಣ ಬರುವ ಹಳದಿ (ಕೊಲೆಸ್ಟ್ರಮ್) ಹಾಲು ಶಿಶುವಿಗೆ ಶಕ್ತಿವರ್ಧಕವಾಗಿದೆ. ಸ್ತನ್ಯಪಾನ ತಾಯಿಯ ಮಮತೆಯ ಪ್ರತೀಕವಾಗಿದೆ. ಪ್ರತಿಯೊಬ್ಬ ತಾಯಿಯಲ್ಲಿ ತನ್ನ ಮಗುವಿಗೆ ಸಾಕಾಗುವಷ್ಟು ಹಾಲನ್ನು ಉತ್ಪಾದಿಸುವ ಸಾಮರ್ಥ್ಯವಿದೆ. ಮಗು ಹಾಲುಂಡಷ್ಟು ಎದೆಹಾಲು ಹೆಚ್ಚು ಉತ್ಪತ್ತಿಯಾಗುವುದು. ಮಗುವಿಗೆ ಹಾಲು ಸಾಕಾಗಲ್ಲ ಎಂಬ ಮನೋಭಾವನೆಯನ್ನು ತೊಡೆದು ಹಾಕಿ ಮಗುವಿನ ಸಮರ್ಪಕವಾದ ಪೋಷಣೆಗೆ ತಾಯಿ ತನ್ನ ಸಾಮರ್ಥ್ಯ ಅರಿತು ಎದೆಹಾಲನ್ನು ಉಣಿಸಲು ಮುಂದಾಗಬೇಕು. ಎದೆಹಾಲು ಬರುತ್ತಿಲ್ಲವೆಂದು ಬಾಟಲಿ ಹಾಲು ಗ್ರೈಪ್ ವಾಟರ್ ಇನ್ನಿತರ ಬೇರೆ ಏನೂ ಕುಡಿಸಬಾರದು. ಮಗುವಿಗೆ ಎದೆಹಾಲಿನ ಜೊತೆಗೆ ಲಸಿಕೆಯನ್ನು ಹಾಕಿಸಬೇಕು ಎಂದು ತಾಯಿಂದಿರರಿಗೆ ತಿಳಿಸಿದರು. ಈ ದಿಶೆಯಲ್ಲಿ ಜಿಲ್ಲೆಯಾದ್ಯಂತ ನಿರಂತರವಾಗಿ ಎಲ್ಲ ತಾಲೂಕುಗಳಲ್ಲಿ ನೀಡುವ ಜಾಗೃತಿ ಶಿಬಿರಗಳ ಮೂಲಕ ಮಾಹಿತಿ ಪಡೆದುಕೊಳ್ಳುವಂತೆ ವಿನಂತಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಮಹಮ್ಮದ್ ಶಾಕೀರ್, ತಾಲೂಕು ಆರೋಗ್ಯಾಧಿಕಾರಿ ಡಾ.ಪ್ರಜ್ವಲ ಕುಮಾರ್, ರೆಡಿಯಾಲಾಜಿಸ್ಟ್ ಡಾ.ಇರ್ಮಾನ ಪರವೇಜ್, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಸರೋಜಾ ಕೆ., ತಜ್ಞವೈದ್ಯರಾದ ಡಾ.ಭುವನೇಶ್ವರಿ, ಡಾ.ಬಸ್ಸಮ್ಮ, ಮಕ್ಕಳ ತಜ್ಞರು, ಶುಶ್ರೂಷಣಾಧಿಕಾರಿಗಳು ಮತ್ತು ಸಿಬ್ಬಂದಿ ಹಾಗೂ ತಾಯಂದಿರು ಉಪಸ್ಥಿತರಿದ್ದರು.

## ಗಾಣದಾಳ ಹೋಬಳಿ ಮಟ್ಟದ ಕ್ರೀಡಾಕೂಟ

ಯುವ ಮಾರ್ಗ ಸುದ್ದಿ



**ರಾಯಚೂರು,ಆ.2–** 2025–26ನೇ ಸಾಲಿನ ಗಾಣದಾಳ ಹೋಬಳಿ ಮಟ್ಟದ ಕ್ರೀಡಾಕೂಟವು ಸರ್ಕಾರಿ ಪ್ರೌಢಶಾಲೆ, ಇಡಪನೂರ್ ಮೈದಾನದಲ್ಲಿ ನಡೆಯಿತು. ಈ ಕ್ರೀಡಾಕೂಟದಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಗಿಲ್ಲೇಸೂಗೂರಿನ ಬಾಲಕ ಮತ್ತು ಬಾಲಕಿಯರ ಥ್ರೋ–ಬಾಲ್ ತಂಡಗಳು ಪ್ರಥಮ ಸ್ಥಾನ ಗಳಿಸಿ ವಿಜಯ ಪತಾಕೆ ಹಾರಿಸಿವೆ.

ಗಿಲ್ಲೇಸೂಗೂರು ಶಾಲೆಯ ಥ್ರೋ–ಬಾಲ್ ತಂಡಗಳು ರಾಯಚೂರು ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದು, ಮುಂದಿನ ಹಂತಕ್ಕೆ ತಲುಪಿವೆ. ತಂಡಗಳ ಈ ಸಾಧನೆಗೆ ಶಾಲೆಯ ಹಿರಿಯ ಮುಖ್ಯ ಶಿಕ್ಷಕರಾದ ಈಶ್ವರಯ್ಯ , ಶಿಕ್ಷಕರು, ಎಸ್‌ಡಿಎಂಸಿ ಅಧ್ಯಕ್ಷರು ಮತ್ತು ಸದಸ್ಯರು ಸಂತಸ ವ್ಯಕ್ತಪಡಿಸಿದ್ದಾರೆ. ಈ ಸಾಧನೆಯು ಶಾಲೆಗೆ ಹೆಮ್ಮೆಯನ್ನು ತಂದಿದೆ ಎಂದು ಅವರು ತಿಳಿಸಿದ್ದಾರೆ.

## ಸಹಾಯಕ ಪ್ರಾಧ್ಯಾಪಕ ಮುಝೀಬ್ ಕರ್ತವ್ಯಕ್ಕೆ ಹಾಜರಿ

ಯುವ ಮಾರ್ಗ ಸುದ್ದಿ




**ಮಾನ್ವಿ, ಆ.2–**ಕರ್ನಾಟಕದ ವಿಜಯಪುರ ಜಿಲ್ಲೆಯ ಸಿಂಧಗಿ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಂಗ್ಲ ಭಾಷಾ ಸಹಾಯಕ ಪ್ರಾಧ್ಯಾಪಕ ಮುಝೀಬ್ ಅಹ್ಮದ್ ಅವರು, ಇತ್ತೀಚೆಗೆ ಕಾಲೇಜು ಶಿಕ್ಷಣ ಇಲಾಖೆಯ ವರ್ಗಾವಣೆ ಪ್ರಕ್ರಿಯೆಯ ಭಾಗವಾಗಿ ರಾಯಚೂರು ಜಿಲ್ಲೆಯ ಮಾನ್ವಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ವರ್ಗಾವಣೆಗೊಂಡಿದ್ದಾರೆ.

ಮಾನ್ವಿ ಕಾಲೇಜಿನಲ್ಲಿ ಸಹಾಯಕ ಪ್ರಾಧ್ಯಾಪಕ ಹುದ್ದೆಯ ಜವಾಬ್ದಾರಿಯನ್ನು ಅವರು ಸ್ನೇಹಿತರೊಂದಿಗೆ ಶನಿವಾರ ವಹಿಸಿಕೊಂಡರು. ಮುಝೀಬ್ ಅಹ್ಮದ್ ಅವರು ತಾವು ಕಲಿತ ಕಾಲೇಜಿಗೆ ಸಹಾಯಕ ಪ್ರಾಧ್ಯಾಪಕರಾಗಿ ನೇಮಕಗೊಂಡಿರುವುದು ವಿಶೇಷ. ಈ ಸಂದರ್ಭದಲ್ಲಿ ಮಾನ್ವಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಜೆ.ಎಲ್. ಈರಣ್ಣ, ಡಾ.ಬಸವರಾಜ ಸುಂಕೇಶ್ವರ, ಚಂದ್ರಶೇಖರ ಹೆಚ್, ಬಿಲಾಲ್, ವಿಕ್ರಂ ಸಜ್ಜನ್, ದೇವೇಂದ್ರಪ್ಪ ಕರಡಿಗುಡ್ಡ, ಶ್ರೀನಿವಾಸ್ ಮಸ್ಕಿ, ಸುಭಾನ್ ಸಾಬ್ ಇದ್ದರು.

## ಯೂರಿಯಾ, ಡಿಎಪಿ, ಕಾಂಪ್ಲೆಕ್ಸ್ ರಸಗೊಬ್ಬರ ಕೊರತೆ ಆತಂಕ ಬೇಡ

**ರಾಯಚೂರು,ಆ.2–**2025–26 ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಗೆ ನಿಗದಿಪಡಿಸಿದ ಗುರಿಯಂತೆ ಹಂತ ಹಂತವಾಗಿ ವಿವಿಧ ಸಂಸ್ಥೆಗಳಿಂದ ಯೂರಿಯಾ, ಡಿ.ಎ.ಪಿ ಮತ್ತು ಕಾಂಪ್ಲೆಕ್ಸ್ ರಸಗೊಬ್ಬರ ಜಿಲ್ಲೆಗೆ ಬರುತ್ತಿದೆ.

ಮುಂಬರುವ ದಿನಗಳಲ್ಲಿ ಸಹ ರಸಗೊಬ್ಬರ ಜಿಲ್ಲೆಗೆ ಬರುತ್ತದೆ. ರೈತರು ರಸಗೊಬ್ಬರ ಕೊರತೆ ಇದೆ ಎಂದು ಭಾವಿಸದೆ ಬೆಳೆಗೆ ಬೇಕಾಗುವ ಒಟ್ಟು ರಸಗೊಬ್ಬರವನ್ನು ಒಂದೇ ಸಲ ಖರೀದಿಸಲು ಮುಂದಾಗಬಾರದು. ಬೆಳೆಗಳಿಗೆ ಬೇಕಾಗುವ ರಸಗೊಬ್ಬರವನ್ನು ಆಯಾ ಹಂತಕ್ಕೆ ಅವಶ್ಯಕತೆಗನುಗುಣವಾಗಿ ಮಾತ್ರ ಖರೀದಿಸಬೇಕೇಂದು ತಿಳಿಯಪಡಿಸಿದೆ. ರಸಗೊಬ್ಬರ ವಿತರಕರಿಗೆ ದಿನಾಂಕ: 01.08.2025 ರಂದು ಯೂರಿಯಾ ರಸಗೊಬ್ಬರವನ್ನು ನೀಡಲಾಗಿರುತ್ತದೆ. ರೈತರು ಬೆಳೆಗೆ ಅವಶ್ಯಕತೆ ಇರುವ ಆಧಾರದ ಮೇಲೆ ರಸಗೊಬ್ಬರವನ್ನು ಬೆಳೆಗೆ ನೀಡಬೇಕು ಮತ್ತು ಯೂರಿಯಾ ರಸಗೊಬ್ಬರವನ್ನು ಕಳೆನಾಶಕ ಜೊತೆಗೆ ಬಳಸದೆ ಅನ್ಯ ಮಾರ್ಗವಾಗಿ ಮರಳು ಅಥವಾ ಮಣ್ಣು ಬಳಸಬೇಕು ಹಾಗೂ ರಸಗೊಬ್ಬರದ ಕೊರತೆ ಬಗ್ಗೆ ಆತಂಕ ಪಡುವ ಅವಶ್ಯಕತೆ ಇರುವುದಿಲ್ಲ ಎಂದು ಜಂಟಿ ಕೃಷಿ ನಿರ್ದೇಶಕರು ರಾಯಚೂರ ಜಿಲ್ಲೆಯ ರೈತ ಬಾಂಧವರಲ್ಲಿ ಮನವಿ ಮಾಡಿದ್ದಾರೆ.

## ಒಂದೇ ಕಟ್ಟಡದಲ್ಲಿ ಹಲವು ಶಾಲೆ: ಪ್ರತಿಭಟನೆ



**ಕಲಬುರಗಿ,ಆ.02–** ಜಿಲ್ಲೆಯಲ್ಲಿ ಒಂದೇ ಕಟ್ಟಡದಲ್ಲಿ 2–3 ಶಾಲೆಗಳನ್ನು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳ ಪರವಾನಿಗೆ ರದ್ದುಪಡಿಸುವಂತೆ ಆಗ್ರಹಿಸಿ ಇಂದು ಕಲ್ಯಾಣ ಕರ್ನಾಟಕ ರಕ್ಷಣಾ ವೇದಿಕೆಯಿಂದ

ಶಾಲಾ ಶಿಕ್ಷಣ ಇಲಾಖೆ,ಉಪ ನಿರ್ದೇಶಕರ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಲಾಯಿತು.

ಕಲಬುರಗಿ ಜಿಲ್ಲೆಯಲ್ಲಿ ಹಲವಾರು ಕಡೆ ಒಂದೇ ಕಟ್ಟಡದಲ್ಲಿ 2–3 ಶಾಲೆಗಳನ್ನು ನಡೆಸುತ್ತಿರುವ ಶಾಲೆಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಈಗಾಗಲೇ ಹಲವಾರು ಬಾರಿ ಶಿಕ್ಷಣ ಇಲಾಖೆಗೆ ದೂರು ನೀಡಿದರೂ ಸಹ ಯಾವುದೇ ಕ್ರಮ ಕೈಗೊಂಡಿಲ್ಲ.

ನಗರದ ಶಿವಶಕ್ತಿನಗರ, ತಾಜಸುಲ್ತಾನಪೂರ ರಸ್ತೆಯಲ್ಲಿರುವ ಒಂದು ಶಾಲೆ ಕಟ್ಟಡದಲ್ಲಿ ಎರಡು ಶಾಲೆಗಳನ್ನು ಅಕ್ರಮವಾಗಿ ನಡೆಸುತ್ತಿದ್ದಾರೆ. ಆದರೆ ಇಲ್ಲಿ ಯಾವುದೇ ಆಟದ ಮೈದಾನ ಸಹ ಇಲ್ಲ.ಕಾಟನ್‌ಮಾರ್ಕೆಟ್ ಹತ್ತಿರ, ಕೃಷ್ಣನಗರದಲ್ಲಿ ಸಹ ಇಂತಹ ಶಾಲೆ ನಡೆಸಲಾಗುತ್ತಿದೆ .ಒಂದು ವಾರದಲ್ಲಿ ಕೂಡಲೇ ಸೂಕ್ತ ಕ್ರಮ ಕೈಗೊಳ್ಳದೇ ಇದ್ದರೆ, ಆಯುಕ್ತ ಕಛೇರಿ ಎದುರು ಉಗ್ರ ಹೋರಾಟ ನಡೆಸಲಾಗುವದು ಎಂದು ಮನವಿ ಸಲ್ಲಿಸಲಾಯಿತು

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಸಂದೀಪ ಭರಣಿ, ಸತೀಶ ಕಡೂಣ,ವಿಶ್ವನಾಥ ಡೇಕೂನ,ಪಪ್ಪು ಬಿದ್ದಾಪೂರ,ಅನೀಲ ಆಳಂದಕರ್,ಅವಿನಾಶ ಕಾಂಬಳೆ ಸೇರಿದಂತೆ ಹಲವರು ಪಾಲ್ಗೊಂಡರು.

## ಪ್ರಾಂಶುಪಾಲರಾಗಿ ಡಾ. ಹಯ್ಯಾಳಪ್ಪ ಸುರಪುರಕರ್ ಅಧಿಕಾರ ಸ್ವೀಕಾರ




ಯುವ ಮಾರ್ಗ ಸುದ್ದಿ

**ದೇವದುರ್ಗ,ಆ.02–** ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾಗಿ ಸುಭಾಶಚಂದ್ರ ಪಾಟೀಲ್ ಅವರು ರಾಯಚೂರಿಗೆ ವರ್ಗಾವಣೆ ಗೊಂಡ ಹಿನ್ನಲೆ ಅವರ ಜಾಗಕ್ಕೆ ಇತಿಹಾಸ ವಿಷಯದ ಸಹ ಪ್ರಾಧ್ಯಾಪಕರು ಹಾಗೂ ಇತಿಹಾಸ ವಿಷಯದ ಮುಖ್ಯಸ್ಥ ಡಾ.ಹಯ್ಯಾಳಪ್ಪ ಸುರಪುರಕರ್ ಅವರು ಶನಿವಾರ ಅಧಿಕಾರ ಸ್ವೀಕರಿಸಿದರು.

ಇವರು ಈ ಹಿಂದೆ ಸರಕಾರಿ ಪ್ರಥಮ ದರ್ಜೆ ಕಾಲೇಜುಯಾದಗಿರಿಯಲ್ಲಿ ನಾಲ್ಕು ವರ್ಷ ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜು ಶಹಾಪುರ ಕಾಲೇಜಿನಲ್ಲಿ 14 ವರ್ಷಗಳ ಕಾಲ ಇತಿಹಾಸ ವಿಷಯದ ಸಹಾಯಕ ಪ್ರಾಧ್ಯಾಪಕರಾಗಿ ಹಾಗೂ ಇತಿಹಾಸ ವಿಷಯದ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿ ಬಳಿಕ,ಇಲಾಖೆಯ ನಿರ್ದೇಶನದಂತೆ ವರ್ಗಾವಣೆ ಗೊಂಡು ಪ್ರಸ್ತುತ ಸರಕಾರಿ ಪ್ರಥಮ ದರ್ಜೆ ಕಾಲೇಜು ದೇವದುರ್ಗದ ಪ್ರಾಂಶುಪಾಲರಾಗಿ ಅಧಿಕಾರ ಸ್ವೀಕರಿಸಿದರು.ಈ ಸಂದರ್ಭದಲ್ಲಿ ಡಾ. ಬಸವರಾಜ ಸಾದಾಪುರ, ಇತಿಹಾಸ ಉಪನ್ಯಾಸಕರು ಹಾಗೂ ಕರ್ನಾಟಕ ಕಲಾ ಮತ್ತು ವಾಣಿಜ್ಯ ಪದವಿ ಮಹಾವಿದ್ಯಾಲಯ ದೇವದುರ್ಗದ ಕಾರ್ಯದರ್ಶಿ ಅಮರೇಶ ಗೋಪಾಳಪುರ, ರಮೇಶ್ ಮಲಬಾದ್, ಹನುಮಂತ್ರಾಯ, ಧರ್ಮಣ್ಣ ಗೌಡ ಪಾಟೀಲ್, ಸಾಬಣ್ಣ ಯಾದಗಿರಿ, ಮಲ್ಲಣ್ಣ ಹೊಸಮನಿ, ಎಚ್ ಡಿ ಶಿವರಾಜ, ಮುನಿಯಪ್ಪ ನಾಗೋಲಿ, ಚಂದ್ರಶೇಖರ ಅಕ್ಕರಕಿ ಸೇರಿದಂತೆ ಅನೇಕ ಉಪನ್ಯಾಸಕರು ಹಾಗೂ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಿಬ್ಬಂದಿಗಳು ಉಪಸ್ಥಿತರಿದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H